ಸಂಪುಟ 01 | ಸಂಚಿಕೆ 127 | ಬುಧವಾರ 25 ಮಾರ್ಚ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರು,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಹುಟ್ಟಲಿರುವ ಮಗುವಿನ ಅಂತರರಾಷ್ಟ್ರೀಯ ದಿನ**
ಇದನ್ನು ಮಾರ್ಚ್ 25 ರಂದು ಆಚರಿಸಲಾಗುತ್ತದೆ. ಇದು ಹುಟ್ಟಲಿರುವ ಭ್ರೂಣಗಳ ವಾರ್ಷಿಕ ಸ್ಮರಣಾರ್ಥವಾಗಿದೆ ಮತ್ತು ಇದನ್ನು ಗರ್ಭಪಾತವನ್ನು ವಿರೋಧಿಸುವ ದಿನವಾಗಿ ಆಚ-ರಿಸಲಾಗುತ್ತದೆ.

**2) ಬಂಧಿತ ಮತ್ತು ಕಾಣೆಯಾದ ಸಿಬ್ಬಂದಿ ಸದಸ್ಯರೊಂದಿಗೆ ಅಂತರರಾಷ್ಟ್ರೀಯ ಒಗ್ಗಟ್ಟಿನ ದಿನ**
ಪ್ರತಿ ವರ್ಷ, ವಿಶ್ವಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದಾಗ ನಿಧನರಾದ ಪತ್ರಕರ್ತ ಅಲೆಕ್ ಕೊಲೆಟ್ ಅವರ ಅಪಹರಣದ ವಾರ್ಷಿಕೋತ್ಸವವನ್ನು ಸ್ಮರಿಸಲು ಮಾರ್ಚ್ 25 ರಂದು ವಿಶ್ವಸಂಸ್ಥೆಯು ಇದನ್ನು ಆಚರಿಸುತ್ತದೆ.

## ಸುಭಾಷಿತ

ಕಲಿಯಲು ತಿರಸ್ಕರಿಸುವುದು
ಜೀವಿಸಲು ತಿರಸ್ಕರಿಸುವುದಕ್ಕೆ
ಸಮವಾದದು

ರಾಮಕೃಷ್ಣ ಪರಮಹಂಸ

# ಜಕ್ಕೂರು ವೈಮಾನಿಕ ತರಬೇತಿ ಕೇಂದ್ರ ಸ್ಥಳಾಂತರಿಸಲ್ಲ :ಡಿ.ಕೆ.ಶಿವಕುಮಾರ್

**ಬೆಂಗಳೂರು: ನಗರದಲ್ಲಿರುವ ಪ್ರತಿಷ್ಠಿತ ಜಕ್ಕೂರು ವೈಮಾನಿಕ ತರಬೇತಿ ಕೇಂದ್ರವನ್ನು ಸ್ಥಳಾಂತರಿಸುವ ಪ್ರಸ್ತಾಪ ಸರ್ಕಾರದ ಮುಂದಿಲ್ಲ ಎಂದು ಬೆಂಗಳೂರು ಅಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.**

ಬೆಂಗಳೂರಿನ ಸಮಸ್ಯೆಗಳು ಮತ್ತು ಅಭಿವೃದ್ಧಿಯ ಕುರಿತು ವಿಧಾನಸಭೆಯಲ್ಲಿ ನಿಯಮ 69 ಆಡಿ ಸಾರ್ವಜನಿಕ ಮಹತ್ವದ ವಿಚಾರವನ್ನಾಗಿ ಚರ್ಚೆ ಕೈಗೆತ್ತಿಕೊಂಡ ಅವರು, ಬಡವರ ಮಕ್ಕಳು ವೈಮಾನಿಕ ತರಬೇತಿ ಪಡೆಯಲಿಕ್ಕಾಗಿ ಹಿಂದೆ ಮೈಸೂರು ಮಹಾರಾಜರು 1940ರಲ್ಲಿ ಅರಣ್ಯ ಇಲಾಖೆಗೆ ಸೇರಿದ 377 ಎಕರೆ ಜಮೀನನ್ನು ಡಿ ನೋಟಿಫಿಕೇಶನ್ ಮಾಡಿ ವೈಮಾನಿಕ ತರಬೇತಿ ಕೇಂದ್ರಕ್ಕಾಗಿ ನೀಡಿದ್ದರು. ಆಗಿನ ಪ್ರಧಾನಿ ಜವಾಹರ್ ಲಾಲ್ ನೆಹರು, ವೈಮಾನಿಕ ತರಬೇತಿ ಕೇಂದ್ರಕ್ಕೆ ಅಡಿಗಲ್ಲು ಹಾಕಿದರು.

ಆದರೆ ಈಗ ಡಿ.ಕೆ. ಶಿವಕುಮಾರ್ ಅವರು ಆ ಕಲ್ಲನ್ನು ಕಿತ್ತು ಹಾಕುತ್ತಿದ್ದಾರೆ ಎಂದು ಆರೋಪಿಸಿದರು. ಸದರಿ ಕೇಂದ್ರಕ್ಕೆ ಈಗ 217 ಎಕರೆ ಭೂಮಿ ಇದೆ. ಅದರ ಮೇಲೆ ಡಿ.ಕೆ. ಶಿವಕುಮಾರ್ ಅವರ ಕಣ್ಣು ಬಿದ್ದಿದೆ ಎಂದು ವರದಿಯಾಗಿದೆ. ಇದು ನಿಜವೇ? ಎಂದು ಪ್ರಶ್ನಿಸಿದರು.ಕಾಂಗ್ರೆಸ್ಸಿನ ಶಾಸಕ ಬಸವರಾಜ ರಾಯರೆಡ್ಡಿ, ಡಿ.ಕೆ. ಶಿವಕುಮಾರ್ ಅವರು ಜಕ್ಕೂರಿನ ವೈಮನಿಕ



ತರಬೇತಿ ಕೇಂದ್ರದ ಜಾಗದ ಮೇಲೆ ಕಣ್ಣು ಹಾಕಿಲ್ಲ. ಅದನ್ನು ಉಳಿಸಬೇಕು ಎಂದು ಪ್ರಯತ್ನ ಮಾಡುತ್ತಿದ್ದಾರೆ ಎಂದು ಸ್ಪಷ್ಟನೆ ನೀಡಿದರು.

ಇಂಧನ ಸಚಿವ ಕೆ.ಜೆ.ಜಾರ್ಜ್, ತಾವು ತರಬೇತಿ ಕೇಂದ್ರದ ಕ್ಲಬ್‌ಗೆ ಸಲಹಾ ಸಮಿತಿಯ ಸದಸ್ಯನಾಗಿದ್ದು ವಾಸ್ತವ ಅಂಶದ ಅರಿವಿದೆ. ಜಕ್ಕೂರು ಏರೋ ಡ್ರೋಮ್‌ನ ಸಮೀಪ ರಾಷ್ಟ್ರೀಯ ಹೆದ್ದಾರಿ ರಸ್ತೆ ಮತ್ತು ಮೆಟ್ರೋ ರೈಲು ಮಾರ್ಗದ ಮೇಲು ಸೇತುವೆಗಳು ಹಾದುಹೋಗಿವೆ. ಹೀಗಾಗಿ ಅಲ್ಲಿ ವಿಮಾನಗಳ ಹಾರಾಟಕ್ಕೆ ಡಿಜಿಸಿಎ ಅನುಮತಿ ನೀಡುತ್ತಿಲ್ಲ. ಈ ಎಲ್ಲಾ ಹಿನ್ನೆಲೆಯಲ್ಲಿ ವೈಮಾನಿಕ ತರಬೇತಿ ಕೇಂದ್ರವನ್ನು ಶಿವಮೊಗ್ಗ, ಹಾಸನ, ಮೈಸೂರು ಸೇ-ರಿದಂತೆ ಬೇರೆ ಕಡೆಗೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳುವಂತೆ ತಾವು ಮುಖ್ಯಮಂತ್ರಿಯವ-ರಿಗೆ ಪತ್ರ ಬರೆದಿದ್ದೇನೆ ಎಂದರು.

ಜಕ್ಕೂರಿನ ಜಾಗದಲ್ಲಿ ಬೃಹತ್ ಕ್ರೀಡಾ ಸಂಕೀರ್ಣ ನಿರ್ಮಾಣ ಮಾಡಲು ಸಲಹೆ ನೀಡಿದ್ದೇನೆ ಎಂದು ಹೇಳಿದರು. ಜಾರ್ಜ್ ಅವರು ಪದೇ ಪದೇ ಅಶೋಕ್ ಅವರ ಮಾತುಗಳಿಗೆ ಅಡ್ಡಿಪಡಿಸಿ, ಸ್ಪಷ್ಟನೆ ನೀಡುವಾಗ ಮಧ್ಯಪ್ರವೇಶಿಸಿದ ಬಿಜೆಪಿಯ ಸುರೇಶ್ ಕುಮಾರ್, ಕುಂಬಳಕಾಯಿ ಎಂದು ಮಾತ್ರವೇ ನಾವು ಹೇಳುತ್ತಿದ್ದೇವೆ. ಸಚಿವರು ಹೆಗಲು ಮುಟ್ಟಿ ನೋಡಿಕೊಳ್ಳುತ್ತಿರುವುದೇಕೆ ಎಂದು ಪ್ರಶ್ನಿಸಿದರು. ಚರ್ಚೆ ಮುಂದುವರಿಸಿದ ಆರ್.ಅಶೋಕ್ ಸರ್ಕಾರಕ್ಕೆ ತರಬೇತಿ ಕೇಂದ್ರವನ್ನು ಸ್ಥಳಾಂತರ ಮಾಡಬಾರದು ಎಂಬ ಉದ್ದೇಶ ಇದ್ದಿದ್ದೆ.

ಹಾಗಿದ್ದರೆ ಯುವಜನ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರು ಮೈಸೂ-ರಿಗೆ ಕೇಂದ್ರ ಸ್ಥಳಾಂತರಿಸುವ ಬಗ್ಗೆ ಸಭೆ ನಡೆಸಿದ್ದೇಕೆ ಎಂದು ಪ್ರಶ್ನಿಸಿದರು. ಕೇಂದ್ರದ ವಿಮಾನ ಹಾರಾಟದ ಪಥದಲ್ಲಿ ಒಂದು ಕಿಲೋಮೀಟರ್ ಗಳಷ್ಟು ದೂರ ಅತಿ ಎತ್ತರದ ಕಟ್ಟಡಗಳ ನಿರ್ಮಾಣಕ್ಕೆ ಅವಕಾಶ ಇಲ್ಲ. ಅದನ್ನು ಹೊರತುಪಡಿಸಿದರೆ ಸುತ್ತಮುತ್ತ ಅತಿ ಎತ್ತರದ ನಿರ್ಮಾಣಗಳಿಗೆ ಯಾವುದೇ ಅಡಚಣೆ ಇಲ್ಲ. ಆದರೂ ರಿಯಲ್ ಎಸ್ಟೇಟ್ ಮಾಫಿಯಾ ಈ ಕೇಂದ್ರವನ್ನು ಸ್ಥಳಾಂತರ ಮಾಡಿಸುವ ಹುನ್ನಾರ ನಡೆಸಿದೆ ಎಂದು ಅಶೋಕ್ ಆರೋಪಿಸಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಧ್ಯ ಪ್ರವೇಶಿ, ದಾಖಲೆಗಳಿಗೆ ತಪ್ಪು ಮಾಹಿತಿ ಹೋಗಬಾರದು ಎಂದು ಸ್ಪಷ್ಟನೆ ನೀಡುತ್ತಿದ್ದೇನೆ. ಜಕ್ಕೂರು ವೈಮಾನಿಕ ತರಬೇತಿ ಕೇಂದ್ರವನ್ನು ಸ್ಥಳಾಂತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ. ಪಿಪಿಪಿ ಮಾದರಿಯಲ್ಲಿ ಕೇಂದ್ರವನ್ನು ಮುಂದುವ-ರಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ. ಸ್ಥಳೀಯ ಶಾಸಕರೂ ಆಗಿರುವ ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರ ಅಭಿಪ್ರಾಯಗಳಿಗೆ ತಮ್ಮ ಸಹಮತ ಇದೆ ಎಂದು ಹೇಳಿದರು.

## ಅದ್ಭುತ ಸಚಿವಾಲಯದಿಂದ ವಿಭಿನ್ನ "ಮಹಿಳಾ ದಿನಾಚರಣೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಅದ್ಭುತ ಸಚಿವಾಲಯದ "ಮಹಿಳಾ ದಿನಾಚರಣೆ"ಯ ಸಂದರ್ಭದಲ್ಲಿ ಮಹಿಳೆಯರಲ್ಲಿ ಅನೇಕ ಶೈಕ್ಷಣಿಕ ಆರೋಗ್ಯ ಮತ್ತು ಸಮಾಲೋಚನೆಯ ಅಂಶಗಳ ಬಗ್ಗೆ ಅರಿವು ಮೂಡಿಸಲು ಅನೇಕ ಕಾರ್ಯಕ್ರಮಗಳನ್ನು ನಡೆಸಲಾಯಿತು.**




. ಆಸ್ಪತ್ರೆಗೆ ಭೇಟಿ ನೀಡಿ ಸಮಾಲೋಚನೆ ನಡೆಸಲಾಯಿತು. ನಾಗರಿಕರ ಕಲ್ಯಾಣಕ್ಕಾಗಿ ಔಟ್ ರೀಚ್ ಸಚಿವಾಲಯವನ್ನು ನಡೆಸಲಾಯಿತು. ಎಲ್ಲಾ ಕಾರ್ಯಕ್ರಮಗಳಿಗೆ ಸಾರ್ವಜನಿಕ-ರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಅದ್ಭುತ ಸಚಿವಾಲಯದ ಅಧ್ಯಕ್ಷ ವೈಭವ್ ಸರ್ ಅವರು ಪದವನ್ನು ಪ್ರೇರೇಪಿಸುವ ಮೂಲಕ ಪ್ರೇಕ್ಷಕರನ್ನು ಪ್ರೋತ್ಸಾಹಿಸಿದರು. ನಾವು ಎಲ್ಲಾ ಸ್ತುತಿಗಳನ್ನು ಭಗವಂತನಿಗೆ ಸಲ್ಲಿಸುತ್ತೇವೆ.

## ಮಾರ್ಚ್ 27ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಮಾರ್ಚ್ 27ರ ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.**

ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ



ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ. ಅರ್ಹತೆಗಳು: ಎಸ್.ಎಸ್.ಎಲ್.ಸಿಮ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 30 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು.


ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9916931616, 9008211750ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಥೋತ್ಸವ ಉದ್ಘಾಟನಾ ಸಮಾರಂಭ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಆರಾಧ್ಯ ದೈವ ಶ್ರೀ ಬಂಡಿ ಬಸವೇಶ್ವರ ದೇವಸ್ಥಾನದ 216ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ ನೂತನವಾಗಿ ನಿರ್ಮಿಸಿದ ರಥೋತ್ಸವದ ಉದ್ಘಾಟನಾ ಸಮಾರಂಭ ಮಾರ್ಚ್ 28 ಶನಿವಾರದಂದು ನಡೆಯಲಿದೆ.**

ಅಂದು ಸಂಜೆ 4:30 ಘಂಟೆಗೆ ಪಟ್ಟಣದ ಶ್ರೀ ಬಂಡಿ ಬಸವೇಶ್ವರ ದೇವಸ್ಥಾನ (ಕನ್ನಡ ಶಾಲೆ ಆವರಣ) ದಲ್ಲಿ ಜರುಗಲಿರುವ ಈ ಸಮಾರಂಭದ ದಿವ್ಯ ಸಾನಿಧ್ಯವನ್ನು ಶ್ರೀ ಖಾಸ್ಗತೇಶ್ವರ ಮಠದ ಪೂಜ್ಯ ಸಿದ್ದಲಿಂಗ ದೇವರು ವಹಿಸಲಿದ್ದು, ಕರ್ನಾಟಕ ಸಾಬೂನು ಮತ್ತು ಮಾರ್ಜಕ



ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಸಿ.ಎಸ್.ನಾಡಗೌಡ ಅಪ್ಪಾಜಿ ಅವರು ಉದ್ಘಾಟಿಸುವರು. ಕಲಬುರ್ಗಿ ದಕ್ಷಿಣ ಭಾಗದ ಶಾಸಕ ಅಲ್ಲಮಪ್ರಭು ಪಾಟೀಲರು ಮುಖ್ಯ ಅತಿಥಿಗಳಾಗಿ ಆಗಮಿಸುವರು.

ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ (ಕು.ಸಾಲವಾಡಗಿ) ರಥೋತ್ಸವಕ್ಕೆ ಪುಷ್ಪಾರ್ಚನೆ ಅರ್ಪಿಸುವರು. ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ, ದೇವಸ್ಥಾನ ಮುಖ್ಯಸ್ಥ ಡಾ.ಬಾಪುಗೌಡ ಸಂ.ಪಾಟೀಲ, ದೇವದುರ್ಗ ಶಾಸಕಿ ಕರೆಮ್ಮ ನಾಯಕ್ ಹಾಗೂ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಆರ್.ಎಸ್.ಪಾಟೀಲ (ಕೂಚಬಾಳ) ಅತಿಥಿಗಳಾಗಿ ಆಗಮಿಸಲಿದ್ದು ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಶರಣಗೌಡ ಸಂ.ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಂಧನೂರು ನಗರಸಭೆಯಿಂದ ವೈಯಕ್ತಿಕ ಚಟುವಟಿಕೆಗಳಿಗೆ ಅರ್ಜಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ಸಿಂಧನೂರಿನ ನಗರಸಭೆಯಿಂದ 2026-27ನೇ ಸಾಲಿನ ಶೇ.7.25 & ಶೇ.5 ಯೋಜನೆಗಳಿಗೆ ಕಾಯ್ದಿರಿಸಲಾದ ಎಸ್.ಎಫ್.ಸಿ (ಮುಕ್ತ ನಿಧಿ) ಅನುದಾನಗಳ ಅನುಷ್ಠಾನಕ್ಕಾಗಿ ವೈಯಕ್ತಿಕ ಚಟುವಟಿಕೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**

ಆಸಕ್ತರು ಪೂರ್ಣ ವಿವರದ ಪ್ರಕಟಣೆಯನ್ನು ನಗರಸಭೆ ಕಾರ್ಯಾಲಯ ನೋಟಿಸ್ ಫಲಕದಲ್ಲಿ ಹಾಗೂ ವೆಬ್‌ಸೈಟ್ ವಿಳಾಸ: http://www.sindhanur-city.mrc.ರಿಠತ.ಎಟಿ/ನಲ್ಲಿ ಪ್ರಕಟಿಸಲಾಗಿದೆ. ಅರ್ಹ ಫಲಾನುಭವಿಗಳು ವೈಯಕ್ತಿಕ ಚಟುವಟಿಕೆವಾರು ಮುಂದೆ ತಿಳಿಸಿರುವ ಅಗತ್ಯ ಎಲ್ಲಾ ದಾಖಲೆಗಳನ್ನು ಗೆಜೆಟೆಡ್




ಅಧಿಕಾರಿಗಳ ಧೃಢೀಕರಣದೊಂದಿಗೆ ಏಪ್ರಿಲ್ 22ರ ಸಂಜೆ 5.30ರೊಳಗೆ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

ಕೊನೆಯ ದಿನಾಂಕ ಮೀರಿ ಬಂದಂತಹ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ವೈಯಕ್ತಿಕ ಚಟುವಟಿಕೆಗಳ ಯೋಜನೆಗಳ ಬಗ್ಗೆ ಸಮರ್ಪಕವಾಗಿ ತಿಳಿದುಕೊಂಡು ಅರ್ಜಿಗಳನ್ನು ಸಲ್ಲಿಸಬೇಕೆಂದು ಸಿಂಧನೂರು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ, ಜಾಲಹಳ್ಳಿ ನಿರ್ದೇಶಕರ ಚುನಾವಣೆಗೆ ಪ್ರಚಾರ ಆರಂಭ

ನೈಜ್ಯ ದೆಸೆ ನ್ಯೂಸ್

**ದೇವದುರ್ಗ: ಮಾ 24 ತಾಲೂಕಿನ ಜಾಲಹಳ್ಳಿ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರ ಚುನಾವಣೆಗೆ ಅಭ್ಯರ್ಥಿಗಳು ಇಂದು ಪ್ರಚಾರ ಕಾರ್ಯವನ್ನು ಭರ್ಜರಿಯಾಗಿ ಪ್ರಾರಂಭಿಸಿದರು.**

ಇಂದು ಬೆಳಿಗ್ಗೆ ದೇವದುರ್ಗ ತಾಲೂಕಿನ ವಿರುಗೋಟ್ ಗ್ರಾಮದ ಶ್ರೀ ಅಡಿವಿ ಲಿಂಗ ಮಹಾರಾಜರವರ ಶ್ರೀ ಮೌನೇಶ್ವರ ಆಸನದಲ್ಲಿ ವೀರಗುಟ್ ತಾತನವರ ಆಶೀರ್ವಾದದೊಂದಿಗೆ ಪ್ರಚಾರಕ್ಕೆ ಚಾಲನೆ ನೀಡಲಾಯಿತು. ಸಾಮೂಹಿಕ ನಾಯಕತ್ವದಲ್ಲಿ ಅಭ್ಯರ್ಥಿಗಳು ಪ್ರಚಾರ



ಆರಂಭಿಸಿದ್ದು, ಈ ಸಂದರ್ಭದಲ್ಲಿ ಅಡಿವಿ ಲಿಂಗ ಮಹಾರಾಜರು ಮಾತನಾಡಿ, ಸೋಲು-ಗೆಲುವನ್ನು ಸಮನಾಗಿ ಸ್ವೀಕರಿಸುವ ಮನೋಭಾವ ಇರಬೇಕು. ಗೆಲುವಿನ ಬಳಿಕ ಬಡವರು ಮತ್ತು ರೈತರ ಸೇವೆಗೆ ಆದ್ಯತೆ ನೀಡಬೇಕು ಎಂದು ಹಿತವಚನ ನೀಡಿದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘವು ಸರ್ಕಾರದಿಂದ ರೈತರ ಅಭಿವೃದ್ಧಿಗಾಗಿ ಸ್ಥಾಪನೆಯಾಗಿರುವುದರಿಂದ, ಚುನಾವಣೆಗೆ ಸ್ಪರ್ಧಿಸುತ್ತಿರುವ ಅಭ್ಯರ್ಥಿಗಳು ಭ್ರಷ್ಟಾಚಾರ ರಹಿತ ಆಡಳಿತ ನೀಡಬೇಕು ಹಾಗೂ ರೈತ-ರಿಗೆ ಸೌಲಭ್ಯ ಒದಗಿಸುವಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು. ಈ ಕಾರ್ಯಕ್ರಮದಲ್ಲಿ ಪ್ರಗತಿಪರ ರೈತ ಮುಖಂಡರಾದ ಅಮರೇಗೌಡ ಕಮಲದಿನ್ನಿ, ಭೀಮಣ್ಣ ಗುಮ್ಮದಾರ್, ರಂಗಣ್ಣ ಕೋಲ್ಕಾರ್, ರಂಗಪ್ಪ ತೊಗರಿ, ಹನುಮಂತ ಮಡಿವಾಳ, ಗಿರಿಯಪ್ಪ ಪೂಜಾರಿ, ಡಾ. ಬಸವರಾಜ್ ಚಿಂಚೋಳಿ, ಅಯ್ಯಪ್ಪ (ಬಂಕಲ್ ದೊಡ್ಡಿ), ಚಿದಾನಂದ, ಸಾಗರ್ ನಾಯಕ್, ಸಾಬಣ್ಣ ಪೂಜಾರಿ, ಶರಣಗೌಡ ಕಮಲದಿನ್ನಿ ಉಪಸ್ಥಿತರಿದ್ದರು.

ಪ್ರಚಾರದಲ್ಲಿ ಸ್ಪರ್ಧಿಸುತ್ತಿರುವ ಅಭ್ಯರ್ಥಿಗಳಾದ ಚಂದ್ರಶೇಖರ್ ನಾಡಗೌಡ, ನೂರು ಮಹಮ್ಮದ್ ಬಳಿಗಾರ, ಬಸವರಾಜ ಯಾದವ್, ವಿಜಯಕುಮಾರ್ ಹಿರೇಮಠ, ಶಿವಬಸಪ್ಪ ರಾಮ್ ಪಾಳಿ, ರಾಮಪ್ಪ, ಮೌನೇಶ್ ಹೆಚ್ ಸಿದ್ದಾಪುರ, ಭೀಮಣ್ಣ ಡೆಂಗಿ, ಬಸನಗೌಡ ಮದಿನಪೂರ್, ಶಿವಮ್ಮ ಬೀಸಲ್, ಹುಸೇನ್ ನಾಸಿ ಭಾಗವಹಿಸಿದರು. ಚುನಾವಣೆಯು ಭಾರಿ ಪೈಪೋಟಿಯಿಂದ ಕೂಡಿದ್ದು, ಗ್ರಾಮದಲ್ಲಿ ರಾಜಕೀಯ ಚಟುವಟಿ-ಕೆಗಳು ದಿನೇ ದಿನೇ ಚುರುಕುಗೊಳ್ಳುತ್ತಿವೆ.

## ಸಾಹಿತ್ಯ ಸಿಂಚನ

ಪರಿಶ್ರಮ

ಹನಿಹನಿಯಾಗಿ ಸೇರಿ ಸಾಗರವಾಗುವುದು,
ಹೆಜ್ಜೆ ಹೆಜ್ಜೆಯಿಂದ ಗುರಿ ಮುಟ್ಟುವುದು?
ಪರಿಶ್ರಮವೇ ಯಶಸ್ಸಿನ ದಾರಿ,
ಅದರಲ್ಲಿ ಇದೆ ಭವಿಷ್ಯದ ಸಿರಿ?

ಬೆವರಿನ ಹನಿಯಲ್ಲಿ ಬೆಳೆದು ಫಲ,
ಕಷ್ಟದ ಹಿಂದೆ ಬರುತ್ತದೆ ಜಯದ ಫಲ?
ಒಮ್ಮೆಯಾದರೂ ಸೋಲು ಕಂಡರೂ,
ಧೈರ್ಯದಿಂದ ಮುಂದೆ ಸಾಗಬೇಕು ಸದಾ?

ಕೈ ಬಿಡದೆ ಮಾಡಿದ ಕೆಲಸ,
ಒಂದು ದಿನ ನೀಡುತ್ತದೆ ಮಹಾ ಫಲ?
ಪರಿಶ್ರಮವಿಲ್ಲದೆ ಇಲ್ಲ ಯಶಸ್ಸು,
ಇದು ಜೀವನದ ನಿಜವಾದ ಪಾಠ?

.ಮನದಲ್ಲಿ ಇಟ್ಟುಕೋ ವಿಶ್ವಾಸ,
ಪಥದಲ್ಲಿ ಇರಲಿ ಶ್ರಮದ ಉಸಿರು?
ನಿನ್ನ ಪ್ರಯತ್ನವೇ ನಿನ್ನ ಬಲ,
ಅದೇ ನಿನ್ನ ಗೆಲುವಿನ ದೀಪ?

.ರಮೇಶ್. ಕೆ.

# ಕರ್ತವ್ಯದ ಹಾದಿಯಲ್ಲಿ ಅರ್ಪಿತವಾದ ಜೀವ: ಡಾ. ಸಮೀಕ್ಷಾ ರೆಡ್ಡಿ ಎಂಬ ಚೇತನ

## ಮಸ್ಕಿ ಪಶುಚಿಕಿತ್ಸಾಲಯದಲ್ಲಿ ಕೈ ಗೆ ಕಪ್ಪು ಪಟ್ಟಿ ಧರಿಸಿ ಶ್ರದ್ಧಾಂಜಲಿ.

ನೈಜ್ಯ ದೆಸೆ ನ್ಯೂಸ್

**ಡಾ. ಸಮೀಕ್ಷಾ ಅವರ ಅಕಾಲಿಕ ನಿಧನಕ್ಕೆ ಸಂತಾಪ ಸೂಚಿಸಿ ಹಾಗೂ ಮೃಗಾಲಯದ ಲೋಪದೋಷಗಳ ವಿರುದ್ಧ ಮೌನ ಪ್ರತಿಭಟನೆ ವ್ಯಕ್ತಪಡಿಸಲು, ಮಸ್ಕಿ ಪಶುಚಿಕಿತ್ಸಾಲಯದ ಎಲ್ಲಾ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಗಳು ಕೈಗೆ ಕಪ್ಪು ಪಟ್ಟಿ ಕಟ್ಟಿಕೊಂಡು ಎರಡು ನಿಮಿಷಗಳ ಕಾಲ ಮೌನಾಚರಣೆ ಮಾಡುವ ಮೂಲಕ ಗೌರವ ಸಲ್ಲಿಸಿದರು.**

ವನ್ಯಜೀವಿಗಳ ಲೋಕದಲ್ಲಿ ಪ್ರತಿಯೊಂದು ಜೀವವೂ ಅಮೂಲ್ಯ. ಆದರೆ, ಆ ಜೀವಗಳನ್ನು ಉಳಿಸುವ ಹಾದಿಯಲ್ಲಿ ತನ್ನ ಪ್ರಾಣವನ್ನೇ ಪಣಕ್ಕಿಟ್ಟ ಡಾ. ಸಮೀಕ್ಷಾ ರೆಡ್ಡಿ ಅವರ ಬಲಿದಾನ ಇಂದು ಮೃಗಾಲಯದ ನಿರ್ವಹಣಾ ವ್ಯವಸ್ಥೆಯ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎತ್ತಿದೆ. ತ್ಯಾವರೆಕೊಪ್ಪ ಮೃಗಾಲಯದಲ್ಲಿ ಯುಗಾದಿಯ ಸಂಭ್ರಮದ ನಡುವೆಯೇ ನಡೆದ ಈ ದುರಂತ ಇಡೀ ರಾಜ್ಯವನ್ನೇ ಕಂಗೆಡಿಸಿದೆ. ವಿದ್ಯಾರ್ಥಿ ದೆಸೆಯಿಂದಲೇ ಅತ್ಯಂತ



ಕ್ರಿಯಾಶೀಲರಾಗಿದ್ದ ಸಮೀಕ್ಷಾ ರೆಡ್ಡಿ ಅವರಿಗೆ ಪ್ರಾಣಿಗಳೆಂದರೆ ಎಲ್ಲಿಲ್ಲದ ಪ್ರೀತಿ. ವನ್ಯಜೀವಿಗಳ ಬಗ್ಗೆ ಅವರು ಹೊಂದಿದ್ದ ಕಾಳಜಿ ಕೇವಲ ವೃತ್ತಿಯಾಗಿರದೆ, ಅದೊಂದು ತಪಸ್ಸಾಗಿತ್ತು.

ನೀರಾನೆಯ ಮೊದಲ ಎರಡು ಮರಿಗಳು ವಿವಿಧ ಕಾರಣಗಳಿಂದ ಸಾವನ್ನಪ್ಪಿದಾಗ, ಮೂರನೇ ಮರಿಯನ್ನಾದರೂ ಹೇಗಾದರೂ ಮಾಡಿ ಉಳಿಸಿಕೊಳ್ಳಲೇಬೇಕು ಎಂಬ ತುಡಿತ ಅವರಲ್ಲಿತ್ತು. ಮತ್ತು ಪ್ರಾಣಿಗಳ ಮೇಲಿನ ಮಮಕಾರವೇ ಅವರನ್ನು ಆ ಮಧ್ಯರಾತ್ರಿ ನೀರಾನೆಯ ಎದುರು ನಿಲ್ಲುವಂತೆ ಮಾಡಲಾಯಿತು.

ಈ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಸಹಾಯಕ ನಿರ್ದೇಶಕರಾದ ಡಾ. ರಾಚಪ್ಪ, ಹಿರಿಯ ಪಶು ವೈದ್ಯಾಧಿಕಾರಿಗಳಾದ ಡಾ. ವಿಶ್ವನಾಥ್, ಪಶು ವೈದ್ಯಾಧಿಕಾರಿಗಳಾದ ಡಾ. ಅಭಿಷೇಕ್, ಮೈರಾಡ BFIL-IBL ಪಶು ವೈದ್ಯಾಧಿಕಾ-ರಿಗಳಾದ ಡಾ. ಸಂದೀಪ್, ಜಾನುವಾರು ಅಭಿವೃದ್ಧಿ ಅಧಿಕಾರಿಗಳಾದ ಜಯರಾಜ್, ಮೈರಾಡ BFIL-IBL ಸಂಸ್ಥೆಯ ಜಿಲ್ಲಾ ಸಂಂ-ಯೋಜಕರಾದ ದುರುಗಪ್ಪ ಮತ್ತು ಪ್ಯಾರವೇಟ್ ರಾದ ಬಸವರಾಜ್ ಭಾಗವಹಿಸಿದ್ದರು.

ಅಲ್ಲದೆ ಮಸ್ಕಿ ತಾಲೂಕಾ ಮೈತ್ರಿ ಕಾರ್ಯಕರ್ತರಾದ ಚನ್ನಾವೀರಯ್ಯ ಸ್ವಾಮಿ, ಪ್ರಭಾನಂದ ಶಾಸ್ತ್ರಿ, ವಿದ್ಯಾನಂದ ಎಸ್., ಬಸವರಾಜ್, ಮೌನೇಶ್ ಹಾಗೂ ಶಿವರಾಜ್ ಸೇರಿದಂತೆ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತ-ರಿದ್ದು, ಮೃತ ವೈದ್ಯೆಯ ಸೇವೆಯನ್ನು ಸ್ಮರಿಸಿದರು. ಎಚ್ಚರಿಕೆಯ ಗಂಟೆ ಸಮೀಕ್ಷಾ ಅವರು ವನ್ಯಜೀವಿಗಳ ಸಂರಕ್ಷಣೆಯ ಬಗ್ಗೆ ದೊಡ್ಡ ಕನಸು ಕಂಡಿದ್ದ ಯುವ ಪ್ರತಿಭೆ. ನೀರಾನೆಯ ಮರಿಯನ್ನು ಉಳಿಸುವ ಅವರ ಪ್ರಾಮಾಣಿಕ ಪ್ರಯತ್ನ ಶ್ಲಾಘನೀಯವಾದರೂ, ಅದಕ್ಕೆ ಅವರು ತೆತ್ತ ಬೆಲೆ ತುಂಬಲಾರದ್ದು. ವನ್ಯಜೀವಿ ಮೃಗಾಲಯಗಳಲ್ಲಿ ಕೆಲಸ ಮಾಡುವ ಸಿಬ್ಬಂದಿಗೆ ಪ್ರಾಣಿಗಳ ವರ್ತನೆಯ ಬಗ್ಗೆ ಸೂಕ್ಷ್ಮ ಜ್ಞಾನ ಮತ್ತು ಕಟ್ಟುನಿಟ್ಟಾದ ಸುರಕ್ಷತಾ ನಿಯಮಗಳ ಪಾಲನೆ ಅತ್ಯಗತ್ಯ. ಸಮೀಕ್ಷಾ ರೆಡ್ಡಿ ಅವರ ಸಾವು ವ್ಯವಸ್ಥೆಗೆ ಒಂದು ಎಚ್ಚರಿಕೆಯ ಗಂಟೆಯಾಗಲಿ. ?ಡಾ. ಸಮೀಕ್ಷಾ ರೆಡ್ಡಿ ಅವರ ವನ್ಯಜೀವಿ ಪ್ರೇಮ ಮತ್ತು ಧೈರ್ಯ ಸದಾ ಸ್ಮರಣೀಯ.

## ಮಾ. 26,27 ಪಾಲಿಕೆಗಳ ಬಜೆಟ್ ಮಂಡನೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಾದ ನಂತರದ ಮೊದಲ ಬಜೆಟ್ ಮಂಡನೆಗೆ ಮುಹೂರ್ತ ನಿಗದಿಯಾಗಿದೆ. ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಬಜೆಟ್ ದಿನಾಂಕಗಳನ್ನು ಚೀಫ್ ಕಮಿಷನರ್ ಮಹೇಶ್ವರ್ ರಾವ್ ಪ್ರಕಟಿಸಿದ್ದಾರೆ. ಇದೇ ಮಾರ್ಚ್ 26 ಗುರುವಾರ ಹಾಗೂ ಮಾರ್ಚ್ 27 ಶುಕ್ರವಾರ ಎರಡು ದಿನಗಳ ಕಾಲ ಬಜೆಟ್ ಮಂಡನೆ ನಡೆಯಲಿದೆ.**

ಮೊದಲ ದಿನವಾದ ಗುರುವಾರ (ಮಾ.26) ಎರಡು ನಗರ ಪಾಲಿಕೆಗಳ ಬಜೆಟ್ ಮಂಡನೆ ನಡೆಯಲಿದ್ದು, ಎರಡನೇ ದಿನವಾದ ಶುಕ್ರವಾರ (ಮಾ.27) ಉಳಿದ ಮೂರು ನಗರ ಪಾಲಿಕೆಗಳ ಬಜೆಟ್ ಮಂಡನೆ ನಡೆಯಲಿದೆ. ಪ್ರತಿ ನಗರ ಪಾಲಿಕೆಯೂ ತಮ್ಮ ತಮ್ಮ ವಲಯ ಮಟ್ಟದಲ್ಲಿ ಬಜೆಟ್ ಮಂಡನೆಗೆ ಸಿದ್ಧತೆಗಳನ್ನು ಪೂರ್ಣಗೊಳಿಸಿದೆ. ಈಗಾಗಲೇ ಆಡಳಿತಾಧಿಕಾರಿಗಳ ಅನುಮೋದನೆ ಕೂಡ ದೊರೆತಿದೆ. ಆಯಾ ವಲಯದ ಹಣಕಾಸು ವಿಭಾಗದ ಮುಖ್ಯಸ್ಥರು ಬಜೆಟ್ ಮಂಡಿಸಲಿದ್ದಾರೆ ಎಂದು ಜಿಬಿಎ ಚೀಫ್ ಕಮಿಷನರ್ ಮಹೇಶ್ವರ್ ರಾವ್ ತಿಳಿಸಿದ್ದಾರೆ.

# ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆ ಏಪ್ರಿಲ್ 12ಕ್ಕೆ



ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಪರೀಕ್ಷೆಯನ್ನು ಏಪ್ರಿಲ್ 12ರಂದು ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಏಕಕಾಲಕ್ಕೆ ಜರುಗಲಿದ್ದು, ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳು ಈ ಪರೀಕ್ಷಗೆ ಕಡ್ಡಾಯವಾಗಿ ಹಾಜರಾಗುವಂತೆ ಕೋರಲಾಗಿದೆ.**

ಜಿಲ್ಲೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ರಾಯಚೂರು (ಬೋಳಮಾನದೊಡ್ಡಿ ರಸ್ತೆ), ಗಿಲ್ಲೇಸೂಗೂರು (ಚಂದ್ರ ಬಂಡ ರಸ್ತೆ), ಯರಮರಸ್ ಕ್ಯಾಂಪ್, ಗಿಲ್ಲೆಸುಗೂರು ಕ್ಯಾಂಪ್, ಮಾನವಿ, ಸಿಂಧನೂರು, ಚನ್ನಹಳ್ಳಿ, ಮಸ್ಕಿ, ಲಿಂಗಸೂಗೂರು, ಸಿರವಾರ, ದೇವದುರ್ಗ ಮತ್ತು ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಯರಮರಸ್ ಕ್ಯಾಂಪ್ ರಾಯಚೂರಿನಲ್ಲಿ 6ನೇ ತರಗತಿಯಿಂದ 10ನೇ ತರಗತಿಯ ವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು ಮತ್ತು ಶೇ.25 ರಷ್ಟು ಸ್ಥಾನಗಳನ್ನು ಇತರೆ ವರ್ಗದವರಿಗೆ ಮೀಸಲಿರಿಸಿ,

ಪ್ರಸ್ತುತ ಕರ್ನಾಟಕದ ಸರ್ಕಾರದ/ ಅಂಗೀಕೃತ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳು ಮತ್ತು ಪ.ಜಾತಿ/ಪ.ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ಆನ್‌ಲೈನ್ ಸೇವಾಸಿಂಧು ವಿಳಾಸ: Website:https://sevasind-huservices.karnataka.gov.in ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿ-ತು. ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳಿಗೆ ದಿನಾಂಕ:12.04.2026 ಭಾನುವಾರದಂದು ಪ್ರವೇಶ ಪರೀಕ್ಷೆಯು ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಏಕಕಾಲಕ್ಕೆ ಜರುಗಲಿದ್ದು, ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳು ಸದರಿ ಪರೀಕ್ಷಗೆ ಕಡ್ಡಾಯವಾಗಿ ಹಾಜರಾಗುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ: ಅಲ್ಪಸಂಖ್ಯಾತರ ಸಹಾಯವಾಣಿ 8277799990, 08022535902, ರಾಯಚೂರು 8496098631, 9731028420, 9731341815, 9686853719, 6361866571, 9108175899 ಅಥವಾ 9902906266, ಮಾನವಿ, ಸಿರವಾರ 7411771075, 886733478, ದೇವದುರ್ಗ 9731794252, 9148233616, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು 8217621732, 9740871306 ಅಥ-'ವಾ 8660879712ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾರ್ಚ್ 25ರಂದು ಎನ್-ಜೆನ್ ಅಂಚೆ ಕಚೇರಿ ಉದ್ಘಾಟನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಭಾರತ ಸರ್ಕಾರದ ಅಂಚೆ ಇಲಾಖೆಯ ರಾಯಚೂರು ವಿಭಾಗದಿಂದ ಎನ್-ಜೆನ್ ಅಂಚೆ ಕಚೇರಿ ಉದ್ಘಾಟನಾ ಕಾರ್ಯಕ್ರಮವನ್ನು ಮಾರ್ಚ್ 25ರ ಬೆಳಿಗ್ಗೆ 10 ಗಂಟೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕೋರಲಾಗಿದೆ.**

ಮುಖ್ಯ ಅತಿಥಿಗಳಾಗಿ ಧಾರವಾಡದ ಎನ್.ಕೆ. ಪ್ರದೇಶ ಅಂಚೆ ಸೇವೆಗಳ ನಿರ್ದೇಶಕರಾದ ಶ್ರೀಹರ್ಷ ಎನ್, ಧಾರವಾಡದ ಎನ್.ಕೆ. ಪ್ರದೇಶ ಸಹಾಯಕ ಪೋಸ್ಟ್ ಮಾಸ್ಟರ್ ಜನರಲ್ (ಬಿಡಿ) ಎಚ್.ಎಂ. ಮಂಜೇಶ್, ರಾಯಚೂರು ವಿಭಾಗದ ಅಂಚೆ ಅಧೀಕ್ಷಕರಾದ ಶಿವಾನಂದ ಆರ್.ಎಚ್., ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಂ. ಹನುಮಂತಪ್ಪ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

# ಮಾರ್ಚ್ 25ರಂದು ವಾರ್ತಾಲಾಪ ಕಾರ್ಯಾಗಾರ ಉದ್ಘಾಟನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ) ಬೆಂಗಳೂರು ಹಾಗೂ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಮಾರ್ಚ್ 25ರ ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ವಾರ್ತಾಲಾಪ ಕಾರ್ಯಾಗಾರವನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು.**

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು




ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾ-ರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್,

ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್,

ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಭಾರತ ಸರ್ಕಾರದ ವಾರ್ತಾ ಶಾಖೆಯ ಹೆಚ್ಚುವರಿ ಮಹಾ ನಿರ್ದೇಶಕರಾದ ಎಸ್.ಬಿ.ರವಿಂದ್ರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ-ರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ರಾಯಚೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಡಾ.ಸುರೇಶ ಜಿ. ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ ಎಂದು ಭಾರತ ಸರ್ಕಾರದ ವಾರ್ತಾ ಶಾಖೆ(ಪಿಐಬಿ) ಬೆಂಗಳೂರು ಕಚೇರಿಯ ಪ್ರಕಟಣೆ ತಿಳಿಸಿದೆ.

# ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿಗಳ ಸೂಚನೆ

## ಡಾ.ಬಾಬು ಜಗಜೀವನ್ ರಾಮ್ ಜಯಂತಿಗೆ ಅಗತ್ಯ ಸಿದ್ಧತೆಯಾಗಲಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯಲ್ಲಿ ಏಪ್ರಿಲ್ 5ರಂದು ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ್ ರಾಮ್ ಅವರ ಜಯಂತಿಗೆ ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮಾರ್ಚ್ 24ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಡಾ.ಬಾಬು ಜಗಜೀವನ್ ರಾಮ ಅವರ ಜಯಂತಿ ಆಚರಣೆ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.**

ಅಂದು ಬೆಳಿಗ್ಗೆ 9 ಗಂಟೆಗೆ ಡಾ.ಬಾಬು ಜಗಜೀವನ ರಾಮ್ ಅವರ ವೃತ್ತದಲ್ಲಿನ ಪುತ್ಥಳಿಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಮತ್ತು ಸಮಾಜ ಕಲ್ಯಾಣ ಇಲಾಖೆಯಿಂದ ಪೂಜಾ ಕಾರ್ಯಕ್ರಮ ಮತ್ತು ಗಣ್ಯರಿಂದ ಪುಷ್ಪನಮನ ಕಾರ್ಯಕ್ರಮ ಇರುತ್ತದೆ. ನಂತರ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.



ಡಾ.ಬಾಬು ಜಗಜೀವನ ರಾಮ್‌ರವರ ಪುತ್ಥಳಿಗೆ ದೀಪಾಲಂಕಾರ ಮಾಡಬೇಕು. ವೃತ್ತದ ಸುತ್ತಲು ಶುಚಿತ್ವ ಕಾರ್ಯ ನಡೆಸಬೇಕು. ಪುತ್ಥಳಿಯ ಹತ್ತಿರ ಪೆಂಡಾಲ್ ಹಾಕಿಸಿ ಗಣ್ಯ ಮಹನಿಯರಿಗೆ ಆಸನ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು.

ವೇದಿಕೆಯ ಕಾರ್ಯಕ್ರಮಕ್ಕೆ ಎಲ್ಲಾ ರೀತಿಯ ಸಿದ್ಧತೆಯಾಗಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಶಿಷ್ಟಾಚಾರದ ಪ್ರಕಾರ ಆಮಂತ್ರಣ ಪತ್ರಿಕೆಗಳನ್ನು ಮುದ್ರಿಸಿ ವಿತರಿಸಬೇಕು. ಜಯಂತಿ ಕಾರ್ಯಕ್ರಮಕ್ಕೆ ಹಂಚಿಕೆ ಮಾಡಲಾಗಿರುವ ಕರ್ತವ್ಯಗಳನ್ನು ಯಾವುದೇ ಲೋಪ ಬಾರದ ಹಾಗೇ ಸಂಬಂಧಪಟ್ಟ ಅಧಿಕಾ-ರಿಗಳು ಕರ್ತವ್ಯ ನಿರ್ವಹಿಸಬೇಕು. ಜಿಲ್ಲಾಮಟ್ಟದ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯವಾಗಿ ಜಯಂತಿ ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು. ಕಾರ್ಯಕ್ರಮದಲ್ಲಿ ಹಾಜರಾತಿ ಪಡೆದುಕೊಳ್ಳಬೇಕು ಎಂದು ಅವರು ಸೂಚನೆ ನೀಡಿದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಸೇರಿದಂತೆ ಎಲ್ಲ ಕಾರ್ಯಕ್ರಮಗಳು ಅಚ್ಚುಕಟ್ಟಾಗಿ ನಡೆಯಬೇಕು ಎಂದು ಸೂಚನೆ ನೀಡಿದರು. ಗಣ್ಯರಿಂದ ಸಲಹೆಗಳು:ಡಾ.ಬಾಬು ಜಗಜೀವನ ರಾಮ್ ವೃತ್ತದ ಅಭಿವೃದ್ಧಿ ಕೆಲಸವನ್ನು ಆದಷ್ಟು ಬೇಗನೆ ಮುಗಿಸಬೇಕೆಂದು ಸಮಾಜದ ಮುಖಂಡರಾದ ರವೀಂದ್ರ ಜಲ್ದಾರ್ ಅವರು ಸಲಹೆ ಮಾಡಿದರು. ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನ ರಾಮ್ ವೃತ್ತದ ಸುತ್ತಲೂ ಸಾಕಷ್ಟು ಸ್ವಚ್ಚತೆ ಕಾಯ್ದುಕೊಳ್ಳಬೇಕು. ಅಂಬೇಡ್ಕರ್ ವೃತದಲ್ಲಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ನಡೆಸುವಂತೆ ಸಮಾಜದ ಮುಖಂಡರಾದ ರಾಜು ಅವರು ಮನವಿ ಮಾಡಿದರು.

ಬಾಬು ಜಗಜೀವನ ರಾಮ್ ಅವರ ಜಯಂತಿಗೆ ಸಮಾಜದವರು ಒಂದು ದಿನದ ಮಟ್ಟಿಗೆ ಆರ್‌ಟಿಓ, ಬಸವೇಶ್ವರ, ಅಂಬೇಡ್ಕರ್ ವೃತ್ತದಲ್ಲಿ ಬ್ಯಾನರ್ ಅಳವಡಿಕೆಗೆ ಅವಕಾಶ ನೀಡಬೇಕು ಎಂದು ಭೀಮಣ್ಣ ಮಂಚಾಲ ಅವರು ಮನವಿ ಮಾಡಿದರು. ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಹಸಿರು ಕ್ರಾಂತಿಯ ಹ-ರಿಕಾರ ಡಾ.ಬಾಬು ಜಗಜೀವನರಾಮ ಅವರ ಹೆಸರನ್ನಿಡಬೇಕು ಎಂದು ಸಮಾಜದ ಅನೇಕ ಗಣ್ಯರು ಸಭೆಯಲ್ಲಿ ಮನವಿ ಮಾಡಿದರು. ಈ ಬಗ್ಗೆ ಪರಿಶೀಲಿಸಲಾಗುವುದು ಎಂದು ಜಿಲ್ಲಾಧಿಕಾ-ರಿಗಳು ಪ್ರತಿಕ್ರಿಯಿಸಿದರು. ಜಯಂತಿ ಆಚರಣೆ ಹಿನ್ನೆಲೆಯಲ್ಲಿ ಏಪ್ರೀಲ್ 5ರಂದು ಮದ್ಯ ಮಾರಾಟ ನಿಷೇಧಿಸಬೇಕು ಎಂಬುದು ಸೇರಿದಂತೆ ಅನೇಕ ಗಣ್ಯರು ಸಭೆಗೆ ನಾನಾ ಸಲಹೆಗಳನ್ನು ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪ್ರವೀಣ ಕುಮಾರ್ ಅವರು ಹಿಂದಿನ ಸಭೆಯ ಸಭಾ ನಡಾವಳಿಯನ್ನು ಓದಿ ಹೇಳಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ರಾಯಚೂರು ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಹಾಗೂ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೃಷ್ಣಾ ಶಾವಂತಗೇರಾ ಸೇ-ರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಸಂಘ,- ಸಂಸ್ಥೆಗಳ ಮುಖಂಡರು ಇದ್ದರು.

## ನೇಮಕಾತಿ ಪ್ರಕಟಣೆ

ಕರ್ನಾಟಕ ಹೈಕೋರ್ಟ್ ನೇಮಕಾತಿ 2026–70 ಸಹಾಯಕ ನ್ಯಾಯಾಲಯ ಕಾರ್ಯದರ್ಶಿ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಕರ್ನಾಟಕ ಹೈಕೋರ್ಟ್ ನೇಮಕಾತಿ 2026: 70 ಸಹಾಯಕ ನ್ಯಾಯಾಲಯ ಕಾರ್ಯದರ್ಶಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಹೈಕೋರ್ಟ್ ಮಾರ್ಚ್ 2026 ರ ಕರ್ನಾಟಕ ಹೈಕೋರ್ಟ್ ಅಧಿಕೃತ ಅಧಿಸೂಚನೆಯ ಮೂಲಕ ಸಹಾಯಕ ನ್ಯಾಯಾಲಯ ಕಾರ್ಯದರ್ಶಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರು ಕರ್ನಾಟಕದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಏಪ್ರಿಲ್ 15, 2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 16–03–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಮತ್ತು ಶುಲ್ಕ ಪಾವತಿಸಲು ಕೊನೆಯ ದಿನಾಂಕ: 15–ಏಪ್ರಿಲ್–2026 ಅಧಿಕೃತ ವೆಬ್‌ಸೈಟ್: karnatakajudiciary.kar.nic.in

## ಸಚಿವರು ಸೂಟ್ ಕೇಸ್ ನಲ್ಲಿ ಅಲ್ಲ ಗೋಣಿಚೀಲದಲ್ಲಿ ಹಣ ತಂದು ದಾವಣಗೆರೆಯಲ್ಲಿ ಕೂರುತ್ತಾರೆ: ಬಿ.ವೈ ವಿಜಯೇಂದ್ರ

ನೈಜ್ಯ ದೆಸೆ ನ್ಯೂಸ್

**ಬಾಗಲಕೋಟೆ: ರಾಜ್ಯದಲ್ಲಿ ಉಪಚುನಾವಣೆ ಪ್ರಚಾರ ಕಾವು ರಂಗೇರುತ್ತಿದೆ. ದಾವಣಗೆರೆ ಹಾಗೂ ಬಾಗಲಕೋಟೆ ಉಪಚುನಾವಣೆಗಳ ಹಿನ್ನೆಲೆ ಆಡಳಿತಾರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷ ಬಿಜೆಪಿ ನಾಯಕರ ನಡುವೆ ವಾಕ್ಸಮರ ಆರಂಭವಾಗಿದೆ.**

ಇಂದು ಬಾಗಲಕೋಟೆಯಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ, ದಾವಣಗೆರೆಯಲ್ಲಿ ಮತದಾರರಿಗೆ ಹಣ ಹಂಚಿಕೆ ಮಾಡಿ ಆಮಿಷವೊಡ್ಡುವ ಪ್ರವೃತ್ತಿ ಜೋರಾಗಿದೆ. ಸೂಟ್‌ಕೇಸ್‌ನಲ್ಲಿ ಹಣ ತರುವುದಿಲ್ಲ, ಸಚಿವರೊಬ್ಬರು ಗೋಣಿಚೀಲದಲ್ಲಿ ಹಣ ತಂದು ಕೂರುತ್ತಾರೆ. ಕ್ಷೇತ್ರದ ರಾಜಕೀಯದಲ್ಲಿ ಏನೆಲ್ಲಾ ನಡೆಯುತ್ತಿದೆ ಎಂದು ನನಗೆ ಗೊತ್ತಿದೆ ಎಂದು ಆರೋಪಿಸಿದರು.

ರಾಜ್ಯದ ಜನತೆ ಕಾಂಗ್ರೆಸ್ ಆಡಳಿತದಿಂದ ಬೇಸತ್ತು




ಹೋಗಿದ್ದಾರೆ. ಗ್ಯಾರಂಟಿ ಭಾಗ್ಯಗಳಿಂದ ರಾಜ್ಯದ ಆರ್ಥಿಕ ಸ್ಥಿತಿ ಹದಗೆಡುತ್ತಿದೆ. ಇದು ಬಡವರು ಮತ್ತು ದೀನದಲಿತರ ವಿರೋಧಿ ಸರ್ಕಾರ', ಈ ಬಾರಿಯ ಉಪಚುನಾವಣೆಯಲ್ಲಿ ಬಿಜೆಪಿಗೆ ಜನ ಮತ ಹಾಕುತ್ತಾರೆ ಎಂದರು.

ಈ ಹಿಂದೆ ಸಿರಾ ಮತ್ತು ಕೆಆರ್ ಪೇಟೆ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಕುತಂತ್ರ ಮಾಡಿತ್ತು ಎಂದು ಆರೋಪಿಸಿದ ಅವರು, ಮತದಾನ ಕೊನೆಯ ದಿನದವರೆಗೆ ಕಾರ್ಯಕರ್ತರು ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಬಾಗಲಕೋಟೆ ಕ್ಷೇತ್ರದಲ್ಲಿ ಇದ್ದ ಸಣ್ಣಪುಟ್ಟ ಗೊಂದಲಗಳನ್ನು ಬಗೆಹರಿಸಲಾಗುವುದು. ಎಲ್ಲ ನಾಯಕರು ಒಟ್ಟಾಗಿ ಕೆಲಸ ಮಾಡಿ ಬಿಜೆಪಿ ಅಭ್ಯರ್ಥಿ ಚರಂತಿಮಠರ ಗೆಲುವಿಗೆ ಶ್ರಮಿಸಲಿದ್ದಾರೆ ಎಂದು ವಿಜಯೇಂದ್ರ ಹೇಳಿದರು.

ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಮಾಜಿ ಸಚಿವ ದಿವಂಗತ ಶಾಮ ನೂರು ಶಿವಶಂಕರಪ್ಪ ಮೊಮ್ಮಗ ಸಮರ್ಥ್ ಶಾಮನೂರುಗೆ ಕಾಂಗ್ರೆಸ್ ಟಿಕೆಟ್ ನೀಡಿರುವುದು ಅಲ್ಪಸಂಖ್ಯಾತ ಮುಸ್ಲಿಂ ಮುಖಂಡರ ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ. ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ದಾಸ್ ಕರಿಯಪ್ಪ ಅವರಿಗೆ ಹೆಚ್ಚಿನ ಬೆಂಬಲ ನೀಡುತ್ತೇವೆ ಎಂದು 12ನೇ ವಾರ್ಡ್‌ನ ಯುವಕರು, 'ಕೈ' ಮುಖಂಡ ಶಫೀಕ್ ಪಂಡಿತ್ ಅವರ ನೇತೃತ್ವದಲ್ಲಿ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ದಾಸ್ ಕರಿಯಪ್ಪ ಅವರಿಗೆ ಬಹಿರಂಗವಾಗಿ ಬೆಂಬಲ ಘೋಷಿಸಿದ್ದಾರೆ. 20ಕ್ಕೂ ಹೆಚ್ಚು ಮುಸ್ಲಿಮರು ಬಿಜೆಪಿಗೆ ಸೇರ್ಪಡೆಗೊಂಡಿದ್ದಾರೆ.

## ಧರ್ಮಾಂತರಗೊಂಡರೆ ಎಸ್‌ಸಿ ಹಕ್ಕಿಲ್ಲ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಪರಿಶಿಷ್ಟ ಸಮುದಾಯದವರು ಹಿಂದೂ, ಬೌದ್ಧ ಅಥವಾ ಸಿಖ್ ಧರ್ಮಗಳನ್ನು ಹೊರತುಪಡಿಸಿ ಇತರ ಧರ್ಮಗಳಿಗೆ ಮತಾಂತರವಾದರೆ "ಪರಿಶಿಷ್ಟ ಜಾತಿ ಸ್ಥಾನಮಾನವನ್ನು ಕಳೆದುಕೊಳ್ಳುತ್ತಾರೆ ಎಂದು ಸುಪ್ರೀಂಕೋರ್ಟ್ ಇಂದು ಸ್ಪಷ್ಟಪಡಿಸಿದೆ. ಈ ಸಂಬಂಧ ಆಂಧ್ರಪ್ರದೇಶ ಹೈಕೋರ್ಟ್ ನೀಡಿದ್ದ ತೀರ್ಪನ್ನು ಸುಪ್ರೀಂಕೋರ್ಟ್ ಎತ್ತಿಹಿಡಿದಿದೆ. ಈ ಮೂಲಕ ಧರ್ಮಾಂತರಗೊಂಡ ಕ್ರೈಸ್ತರು ಎಸ್‌ಸಿ ಹಕ್ಕುಗಳನ್ನು ಅಥ–ವಾ ಎಸ್‌ಸಿ/ಎಸ್‌ಟಿ (ಅತ್ಯಾಚಾರ ತಡೆ) ಕಾಯ್ದೆಯ ರಕ್ಷಣೆಯನ್ನು ಬೇಡಿಕೊಳ್ಳಲು ಸಾಧ್ಯವಿಲ್ಲವೆಂದು ನ್ಯಾಯಾಲಯ ತೀರ್ಪು ನೀಡಿದೆ.**



ಆಂಧ್ರ ಪ್ರದೇಶ ಹೈಕೋರ್ಟ್ ನೀಡಿದ್ದ ತೀರ್ಪನ್ನು ಮಾನ್ಯಗೊಳಿಸಿದ ಸುಪ್ರೀಂ ಕೋರ್ಟ್, "1950ರ ಸಂವಿಧಾನ (ಪರಿಶಿಷ್ಟ ಜಾತಿ) ಆದೇಶದ ಉಪನಿಯಮ 3 ಪ್ರಕಾರ, ಹಿಂದೂ, ಸಿಖ್ ಅಥವಾ ಬೌದ್ಧ ಧರ್ಮವನ್ನು ಅನುಸರಿಸುವವರಿಗಷ್ಟೇ ಪರಿಶಿಷ್ಟ ಜಾತಿ ಸ್ಥಾನಮಾನ ಅನ್ವಯಿಸುತ್ತದೆ. ಇತರ ಧರ್ಮಗಳಿಗೆ ಮತಾಂತರವಾದ ಕ್ಷಣದಿಂದಲೇ ಆ ವ್ಯಕ್ತಿ ಎಸ್‌ಸಿ ಹುದ್ದೆಯನ್ನು ಸಂಪೂರ್ಣವಾಗಿ ಕಳೆದುಕೊಳ್ಳುತ್ತಾನೆ" ಎಂದು ಹೇಳಿದೆ. ನ್ಯಾಯಮೂರ್ತಿಗಳಾದ ಪ್ರಶಾಂತ್ ಕುಮಾರ್ ಮಿಶ್ರಾ ಮತ್ತು ಮನಮೋಹನ್ ಅವರಿದ್ದ ಪೀಠ, "ಒಬ್ಬ ವ್ಯಕ್ತಿ ಒಂದೇ ಸಮಯದಲ್ಲಿ ಬೇರೆ ಧರ್ಮವನ್ನು ಅನುಸರಿಸುತ್ತಾ, ಪರಿಶಿಷ್ಟ ಜಾತಿಗೆ ಸೇರಿದವನೆಂದು ಹೇಳಿಕೊಳ್ಳಲು ಸಾಧ್ಯವಿಲ್ಲ. ಸಂವಿಧಾನ ಮತ್ತು ಕಾನೂನುಗಳ ಅಡಿಯಲ್ಲಿ ದೊರೆಯುವ ಯಾವುದೇ ಸೌಲಭ್ಯ, ಮೀಸಲಾತಿ ಅಥವಾ ರಕ್ಷಣೆಯನ್ನು ಇಂತಹ ವ್ಯಕ್ತಿಗೆ ನೀಡಲು ಸಾಧ್ಯವಿಲ್ಲ" ಎಂದು ಸ್ಪಷ್ಟಪಡಿಸಿದೆ. ಪ್ರಕರಣದ ಹಿನ್ನೆಲೆ : ಈ ಪ್ರಕರಣದಲ್ಲಿ ದೂರುದಾರನು ಕ್ರೈಸ್ತ ಧರ್ಮಕ್ಕೆ ಮತಾಂತರಗೊಂಡು ಪಾಸ್ಟರ್ ಆಗಿ ಸೇವೆ ಸಲ್ಲಿಸುತ್ತಿದ್ದರೂ, ತನ್ನ ಮೇಲೆ ನಡೆದ ದಾಳಿಯ ಕುರಿತು ಎಸ್‌ಸಿ/ಎಸ್‌ಟಿ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದನು. ಆರೋಪಿಗಳು ಇದನ್ನು ಪ್ರಶ್ನಿಸಿ, "ಕ್ರೈಸ್ತ ಧರ್ಮಕ್ಕೆ ಮತಾಂತರವಾದ ವ್ಯಕ್ತಿಗೆ ಎಸ್‌ಸಿ ಹಕ್ಕು ಅನ್ವಯಿಸುವುದಿಲ್ಲ" ಎಂದು ವಾದಿಸಿದ್ದರು. ಆಂಧ್ರ ಪ್ರದೇಶ ಹೈಕೋರ್ಟ್ ಕೂಡ ಇದೇ ಅಭಿಪ್ರಾಯ ವ್ಯಕ್ತಪಡಿಸಿ, ಕ್ರೈಸ್ತ ಧರ್ಮದಲ್ಲಿ ಜಾತಿ ವ್ಯವಸ್ಥೆಗೆ ಸ್ಥಾನವಿಲ್ಲ ಎಂದು ಹೇಳಿ ಪ್ರಕರಣವನ್ನು ರದ್ದುಪಡಿಸಿತ್ತು. ಇದನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲಾಗಿತ್ತು. ಸುಪ್ರೀಂ ಕೋರ್ಟ್ ಅಭಿಪ್ರಾಯ : ಸುಪ್ರೀಂ ಕೋರ್ಟ್ ಗಮನಿಸಿದಂತೆ, ಸಂಬಂಧಿತ ವ್ಯಕ್ತಿ ಮತ್ತೆ ತನ್ನ ಮೂಲ ಧರ್ಮಕ್ಕೆ ಮರಳಿಲ್ಲ ಹಾಗೂ ಕ್ರೈಸ್ತ ಧರ್ಮವನ್ನು ಸಕ್ರಿಯವಾಗಿ ಅನುಸರಿಸುತ್ತಿದ್ದಾನೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ನಿಯಮಿತವಾಗಿ ಚಲಿಸಲಿವೆ ವಿಶೇಷ ರೈಲುಗಳು :ಡಾ.ಬಾಬುರಾವ್

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕಲ್ಯಾಣ ಕರ್ನಾಟಕದ ಜನತೆಯ ಬಹುದಿನದ ಕನಸು ನನಸಾಗಿದೆ. ಬೆಂಗಳೂರು ಕಂಟೋನ್ಮೆಂಟ್ ಕಲಬುರಗಿ ವಿಶೇಷ ಎಕ್ಸ್ ಪ್ರೆಸ್ ರೈಲು (ರೈಲು ಸಂಖ್ಯೆ: 16563 / 16564) ಇನ್ನೂ ಮುಂದೆ ನಿಯಮಿತವಾಗಿ ಸಂಚರಿಸಲಿದೆ ಎಂದು ರೈಲ್ವೆ ಸಲಹಾ ಸಮಿತಿ ಮಾಜಿ ಸದಸ್ಯ ಡಾ. ಬಾಬುರಾವ್ ತಿಳಿಸಿದ್ದಾರೆ.**

ಈ ಕುರಿತು ಪ್ರಕಟಣೆ ನೀಡಿರುವ ಅವರು, 16563 ನಂಬರಿನ ಬೆಂಗಳೂರು ಕಂಟೋನ್ಮೆಂಟ್– ಕಲಬುರಗಿ ಎಕ್ಸ್‌ಪ್ರೆಸ್ ರೈಲು ಬೆಂಗಳೂರು ಕಂಟೋನ್ಮೆಂಟ್ ನಿಂದ ಶನಿವಾರ ರಾತ್ರಿ 10 ಕ್ಕೆ ಹೊರಟು ಹೊರಟು ರಾತ್ರಿ 3ರಿಂದ 3–05 ಕ್ಕೆ ಧರ್ಮಾವರಂ, ಬೆಳಿಗ್ಗೆ 9.25 ರಿಂದ 9.30 ರ ವೇಳೆಗೆ ವಾಡಿ ಮೂಲಕ ಭಾನುವಾರ ಬೆಳಿಗ್ಗೆ 10.20ಕ್ಕೆ ತಲುಪಲಿದೆ ಎಂದು ಅವರು ತಿಳಿಸಿದ್ದಾರೆ. 16564 ಸಂಖ್ಯೆಯ ಕಲಬುರಗಿ ? ಬೆಂಗಳೂರು ಕಂಟೋನ್ಮೆಂಟ್ ಎಕ್ಸ್ ಪ್ರೆಸ್ ರೈಲು ಭಾನುವಾರ ರಾತ್ರಿ 11.20ಕ್ಕೆ ಹೊರಟು ವಾಡಿಗೆ 11:55 / 12:00, ಧರ್ಮಾವರಂ: 19:30 / 19:35 ಮೂಲಕ ಹಾಯ್ದು ಬೆಂಗಳೂರು ಕಂಟೋನ್ಮೆಂಟ್ ನ್ನು ಬೆಳಿಗ್ಗೆ 11 ಗಂಟೆಗೆ ತಲುಪಲಿದೆ. ಯಲಹಂಕ, ಹಿಂದೂಪೂರ, ಧರ್ಮಾವರಂ, ಅನಂತಪುರ, ಗುಂತಕಲ್, ಆದೋನಿ, ಮಂತ್ರಾಲಯಂ ರಸ್ತೆ, ರಾಯಚೂರು, ಕೃಷ್ಣಾ, ಯಾದಗಿರಿ, ಶಹಬಾದ್ ರೈಲು ನಿಲ್ದಾಣಗಳಲ್ಲಿ ನಿಲುಗಡೆಯಾಗಲಿದೆ.

ವಾರಕ್ಕೆ ಒಮ್ಮೆ ಬೆಂಗಳೂರುದಿಂದ: ಶನಿವಾರ ಕಲಬುರಗಿಯಿಂದ: ಭಾನುವಾರ ಈ ರೈಲು ನಿಯಮಿತವಾಗಿ ಸಂಚ–ರಿಸಲಿದೆ ಎಂದು ಅವರು ತಿಳಿಸಿದ್ದಾರೆ.



ಅದೇ ರೀತಿ ಎಸ್.ಎಂ.ವಿ ಟಿ ಬೆಂಗಳೂರು– ಬೀದರ್ ವಿಶೇಷ ರೈಲು ಈಗ ನಿಯಮಿತವಾಗಿ ಸಂಚರಿಸಲಿದ್ದು, ಎಸ್.ಎಂ.ವಿ ಟಿ ಬೆಂಗಳೂರು– ಬೀದರ್ ವಿಶೇಷ ರೈಲು (ರೈಲು ಸಂಖ್ಯೆ: 16559 / 16560) ಬೆಂಗಳೂ–ರಿನಿಂದ ಪ್ರತಿ ಶುಕ್ರವಾರ ಹಾಗೂ ಭಾನುವಾರ : ರಾತ್ರಿ 9.15 ಕ್ಕೆ ಹೊರಟು ಧರ್ಮಾವರಂ ಗೆ ರಾತ್ರಿ 12.20 ರಿಂದ 12.25 ರವರೆಗೆ ವಾಡಿಗೆ ಬೆಳಿಗ್ಗೆ 08:10 / 08:15 ನಂತರ ಬೆಳಿಗ್ಗೆ 9.10 ರಿಂದ 9.15 ಕಲಬುರಗಿ, ಮಧ್ಯಾಹ್ನ 12.15 ರ ವೇಳೆಗೆ ಬೀದರ ತಲುಪಲಿದೆ.

ಹಾಗೇ ಶನಿವಾರ ಮತ್ತು ಸೋಮವಾರ ಮಧ್ಯಾಹ್ನ 2 ಗಂಟೆಗೆ ಬೀದರಿನಿಂದ ಹೊರಡುವ ರೈಲು (ಸಂಖ್ಯೆ 16560) ಕಲಬುರಗಿಗೆ ಸಂಜೆ 5 ಗಂಟೆಗೆ, ಧರ್ಮಾವರಂಗೆ ರಾತ್ರಿ 12 ಗಂಟೆ 10 ಇಲ್ಲವೆ 15 ನಿಮಿಷಕ್ಕೆ ಬರಲಿದೆ. ಯಲಹಂಕ, ಧರ್ಮಾವರಂ, ಅನಂತಪುರ, ಗುಂತಗಲ್, ಆದೋನಿ, ಮಂತ್ರಾಲಯಂ ರಸ್ತೆ, ರಾಯಚೂರು, ಕೃಷ್ಣ, ವಾಡಿ, ಶಹಾಬಾದ್, ಹುಮನಾಬಾದ್ ರೈಲುನಿಲ್ದಾಣಗಳಲ್ಲಿ ನಿಲುಗಡೆಯಾಗಲಿದೆ ಎಂದು ಅವರು ತಿಳಿಸಿದ್ದಾರೆ. ವಾರಕ್ಕೆ ಎರಡು ಬಾರಿ ಬೆಂಗಳೂರುದಿಂದ: ಶುಕ್ರವಾರ & ಭಾನುವಾರ ಬೀದರ್ನಿಂದ ಶನಿವಾರ & ಸೋಮವಾರ ಈ ರೈಲು ಸಂಚರಿಸಲಿದೆ ಎಂದು ತಿಳಿಸಿದ್ದಾರೆ. ಈ ರೈಲು ಸಂಚಾರಕ್ಕೆ ಎರಡು ದಶಕಗಳಿಂದ ಈ ಭಾಗದ ಜನರ ಬೇಡಿಕೆಯಾಗಿತ್ತು. ಜನರ ಬೇಡಿಕೆಯಲ್ಲಿ ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣನವರ ಗಮನಕ್ಕೆ ತಂದು ಜನರ ಪರವಾಗಿ ಮನವಿ ಮಾಡಿಕೊಳ್ಳಲಾಗಿ–ತ್ತು. ನಮ್ಮ ಮನವಿಗೆ ಹಾಗೂ ಜನರ ಆಶೋತ್ತರಕ್ಕೆ ಸ್ಪಂದಿಸಿರುವ ವಿ.ಸೋಮಣ್ಣನವರು ಅಭಿನಂದನಾರ್ಹರು ಎಂದು ಹೇಳಿದರು.

## 30 ವರ್ಷಗಳಿಂದ ಮೂಲ ಸೌಕರ್ಯಗಳಿಲ್ಲದೆ ನಲಗಮದಿನ್ನಿ ಗ್ರಾಮ ನಿರ್ಲಕ್ಷ್ಯ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ಚಿಕ್ಕಕೋಟೆಕಲ್ ಗ್ರಾಮ ಪಂಚಾಯತಿ ವ್ಯಾಪ್ತಿಯ ನಲಗಮದಿನ್ನಿ ಗ್ರಾಮವು ಕಳೆದ ಸುಮಾರು 32 ವರ್ಷಗಳಿಂದ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿದ್ದು, ಗ್ರಾಮಸ್ಥರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ದಲಿತ ಸೇನೆ ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ತಾಜುದ್ದೀನ್ ಚೀಕಲಪರ್ವಿ ಆರೋಪಿಸಿದರು.**

1992ರಲ್ಲಿ ಶಿಫ್ಟಿಂಗ್ ವಿಲೇಜ್ ಎಂದು ಸರ್ಕಾರದಿಂದ ಹಂಚಿಕೆ ಮಾಡಲ್ಪಟ್ಟಿದ್ದರೂ,




ಇಂದಿಗೂ ಗ್ರಾಮದಲ್ಲಿ ಸಮರ್ಪಕ ರಸ್ತೆ, ಕುಡಿಯುವ ನೀರು ಹಾಗೂ ಒಳಚರಂಡಿ ವ್ಯವಸ್ಥೆ ಕಲ್ಪಿಸಲಾಗಿಲ್ಲ ಎಂದು ಅವರು ದೂರಿದರು. ಈ ಕುರಿತು ಪಂಚಾಯಿತಿ ಅಭಿವೃದ್ಧಿ ಅಧಿಕಾ–ರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ. ಗ್ರಾಮದಲ್ಲಿ ರಸ್ತೆ ನಕ್ಷೆಯಲ್ಲಿ ಇದ್ದರೂ ನಿರ್ಮಾಣ ಮಾಡದೇ ನಿರ್ಲಕ್ಷ್ಯ ವಹಿಸಲಾಗಿದೆ. ಅಲ್ಲದೆ ಪಂಚಾಯಿತಿ ಸಿಬ್ಬಂದಿ ಮತ್ತು ಅಧಿಕಾರಿಗಳು ಸಾರ್ವಜನಿಕ–ರಿಗೆ ಸೂಕ್ತ ಉತ್ತರ ನೀಡದೇ ಉಡಾಫೆ ಧೋರಣೆ ತೋರಿಸುತ್ತಿದ್ದು, ಕೆಲವೊಮ್ಮೆ ನಾಗ–ರಿಕರ ಗುರುತಿನ ಬಗ್ಗೆ ಪ್ರಶ್ನೆ ಕೇಳುತ್ತಿರುವುದು ವಿಷಾದನೀಯ ಎಂದು ಅವರು ಹೇಳಿದರು.

ಈ ಸಮಸ್ಯೆಗಳನ್ನು ತಕ್ಷಣ ಪರಿಹರಿಸಿ, ಕುಡಿಯುವ ನೀರು, ರಸ್ತೆ ಹಾಗೂ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಬೇಕು. ಜೊತೆಗೆ ತಮ್ಮ ಕರ್ತವ್ಯದಲ್ಲಿ ವಿಫಲರಾದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಂಡು ಅಮಾನತು ಮಾಡಬೇಕು ಎಂದು ಆಗ್ರಹಿಸಿದರು. ಕ್ರಮ ಕೈಗೊಳ್ಳದಿದ್ದಲ್ಲಿ ಗ್ರಾಮ ಪಂಚಾಯಿತಿ ಹಾಗೂ ತಾಲೂಕು ಆಡಳಿತದ ವಿರುದ್ಧ ಮುಂದಿನ ಹಂತದಲ್ಲಿ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಸಿದರು.

## ನಾಲತವಾಡ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಆರೋಗ್ಯ ರಕ್ಷಾ ಸಮಿತಿ ಸದಸ್ಯರಿಗೆ ಸನ್ಮಾನ




ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ತಾಲೂಕಿನ ನಾಲತವಾಡ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮಂಗಳವಾರ ಸಂಜೆ ಆರೋಗ್ಯ ರಕ್ಷಾ ಸಮಿತಿ ಸದಸ್ಯರ ಸನ್ಮಾನ ಕಾರ್ಯಕ್ರಮ ನೆರವೇರಿತು. ಸಮುದಾಯ ಆರೋಗ್ಯ ಕೇಂದ್ರದ ಆರೋಗ್ಯ ರಕ್ಷಾ ಸಮಿತಿಗೆ ಆಯ್ಕೆಯಾದ ಡಾ. ರಾಜೇಂದ್ರ ಗಲಗಲಿ, ಮಹ್ಮದ ಯೂನುಸ್ ಮೂಲಿಮನಿ, ಸಿದ್ದಣ್ಣ ಕಟ್ಟಿಮನಿ ಹಾಗೂ ವಿನೋದಾ ಅಮಾತಿಗೌಡ ಅವರನ್ನು ಕೇಂದ್ರದ ವತಿಯಿಂದ ಸನ್ಮಾನಿಸಲಾಯಿತು.**

ಈ ಸಂದರ್ಭದಲ್ಲಿ ಮಾತನಾಡಿದ ವೈದ್ಯಾಧಿಕಾರಿ ಡಾ. ರಂಗನಾಥ ವೈದ್ಯ, ಸರ್ಕಾರವು ಆರೋಗ್ಯ ರಕ್ಷಾ ಸಮಿತಿಗಳ ಮೂಲಕ ಆಸ್ಪತ್ರೆಗಳ ಅಭಿವೃದ್ಧಿಗೆ ಸ್ಥಳೀಯರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸಲು ಮುಂದಾಗಿದೆ. ಸಮಿತಿಯ ಸದಸ್ಯರು ಆಸ್ಪತ್ರೆಯ ವ್ಯವಸ್ಥೆ ಸುಧಾರಣೆ, ರೋಗಿಗಳಿಗೆ ಉತ್ತಮ ಸೌಲಭ್ಯ ಒದಗಿಸುವುದು ಹಾಗೂ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಪ್ರಮುಖ ಪಾತ್ರವಹಿಸಬೇಕು ಎಂದು ಹೇಳಿದರು.

ಸಮಿತಿ ಸದಸ್ಯ ಸಿದ್ದಣ್ಣ ಕಟ್ಟಿಮನಿ ಮಾತನಾಡಿ, ಶಾಸಕ ಸಿ.ಎಸ್. ನಾಡಗೌಡ (ಅಪ್ಪಾಜಿ) ಅವರು ನೀಡಿದ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುವುದಾಗಿ ಭರವಸೆ ನೀಡಿದರು.


ಆಸ್ಪತ್ರೆಯಲ್ಲಿ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಹಾಗೂ ವ್ಯವಸ್ಥೆಯನ್ನು ಸುಧಾರಿಸಲು ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇವೆ ಎಂದರು. ಮತ್ತೊಬ್ಬ ಸದಸ್ಯ ಡಾ. ರಾಜೇಂದ್ರ ಗಲಗಲಿ ಮಾತನಾಡಿ, ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ರಂಗನಾಥ ವೈದ್ಯ ಅವರ ಸೇವೆಯನ್ನು ಶ್ಲಾಘಿ–ಸಿದರು. ನಮಗೆ ನೀಡಿದ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸುವುದಾಗಿ ಹೇಳಿದರು. ಕಾರ್ಯಕ್ರಮದಲ್ಲಿ ಆರೋಗ್ಯ ಕೇಂದ್ರದ ವೈದ್ಯರು, ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಸನ್ ರೈಸ್ ಕಾಲೇಜಿನಲ್ಲಿ ವಿಶ್ವ ಟಿಬಿ ದಿನ ಅರ್ಥಪೂರ್ಣವಾಗಿ ಆಚರಣೆ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸನ್ ರೈಸ್ ಡಿ–ಫಾರ್ಮಸಿ , ನರ್ಸಿಂಗ್, ಪಾರಾ ಮೆಡಿಕಲ್ ಕಾಲೇಜು ವತಿಯಿಂದ ವಿಶ್ವ ಟಿಬಿ ದಿನಾಚರಣೆಯನ್ನು ಅತ್ಯಂತ ಅರ್ಥ–ಪೂರ್ಣ ಹಾಗೂ ಜಾಗೃತಿ ಮೂಡಿಸುವ ರೀತಿಯಲ್ಲಿ ಆಚರಿಸಲಾಯಿತು. "ಹೌದು! ನಾವು ಟಿಬಿಯನ್ನು ನಿರ್ಮೂಲನೆ ಮಾಡಬಹುದು" ಎಂಬ ಘೋಷವಾಕ್ಯದೊಂದಿಗೆ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಯಲ್ಲಿ ಆರೋಗ್ಯ ಜಾಗೃತಿ ಮೂಡಿಸುವುದೇ ಇದರ ಮುಖ್ಯ ಉದ್ದೇಶವಾಗಿತ್ತು.**

ಕಾರ್ಯಕ್ರಮದ ಆರಂಭದಲ್ಲಿ ನರ್ಸಿಂಗ್ ವಿಭಾಗದ ಉಪನ್ಯಾಸಕರಾದ ವೀರೇಶ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಕ್ಷಯರೋಗವು ಒಂದು ಗಂಭೀರವಾದ ಸಾಂಕ್ರಾಮಿಕ ರೋಗವಾಗಿದ್ದು, ಸಮಯಕ್ಕೆ ಸರಿಯಾದ ಪತ್ತೆ ಮತ್ತು ಪೂರ್ಣ ಚಿಕಿತ್ಸೆ ಮೂಲಕ ಸಂಪೂರ್ಣವಾಗಿ ಗುಣಪಡಿಸಬಹುದಾಗಿದೆ ಎಂಬ ಮಹತ್ವದ ಸಂದೇಶವನ್ನು ನೀಡಿದರು. ಅವರು ಟಿಬಿ ರೋಗದ ಹರಡುವಿಕೆ, ಲಕ್ಷಣಗಳು (ನಿರಂತರ ಕೆಮ್ಮು, ಜ್ವರ, ತೂಕ ಇಳಿಕೆ, ರಾತ್ರಿ ಬೆವರು), ಹಾಗೂ ಮುನ್ನೆಚ್ಚ–




ರಿಕೆ ಕ್ರಮಗಳ ಕುರಿತು ವಿವರವಾಗಿ ತಿಳಿಸಿದರು. ನಂತರ ನರ್ಸಿಂಗ್ ವಿದ್ಯಾರ್ಥಿಗಳು ನಾಟಕದ ಮೂಲಕ ಟಿಬಿ ರೋಗದ ಬಗ್ಗೆ ಸಮಾಜದಲ್ಲಿ ಇರುವ ಅಜ್ಞಾನ, ನಿರ್ಲಕ್ಷ್ಯ ಹಾಗೂ ಅದರ ದುಷ್ಪರಿಣಾಮಗಳನ್ನು ಸ್ಪಷ್ಟವಾಗಿ ಬಿಂಬಿಸಿದರು.

ಸಮಯಕ್ಕೆ ಚಿಕಿತ್ಸೆ ಪಡೆಯದಿದ್ದಲ್ಲಿ ಉಂಟಾಗುವ ಗಂಭೀರ ಸಮಸ್ಯೆಗಳು ಹಾಗೂ ಚಿಕಿತ್ಸೆ ಪೂರ್ಣಗೊಳಿಸುವ ಅಗತ್ಯತೆಯನ್ನು ಮನೋಜ್ಞವಾಗಿ ಪ್ರದರ್ಶಿಸಿದ ಈ ನಾಟಕವು ಎಲ್ಲರ ಮನಸನ್ನು ಸ್ಪರ್ಶಿಸಿತು. ವಿದ್ಯಾರ್ಥಿಗಳ ಈ ಪ್ರಯತ್ನ ಜಾಗೃತಿ ಮೂಡಿಸುವಲ್ಲಿ ಪ್ರಮುಖ ಪಾತ್ರವಹಿಸಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಇರ್ಫಾನ್ ಕೆ. ಅತ್ತಾರ್ ಅವರು ಮಾತನಾಡಿ, "ಕ್ಷಯರೋಗ ನಿರ್ಮೂಲನೆಗೆ ಆರೋಗ್ಯ ಕ್ಷೇತ್ರದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಪಾತ್ರ ಅತ್ಯಂತ ಮಹತ್ವದ್ದು. ನೀವು ಕೇವಲ ವಿದ್ಯಾರ್ಥಿಗಳಲ್ಲ, ಭವಿಷ್ಯದ ಆರೋಗ್ಯ ರಕ್ಷಕರು. ನಿಮ್ಮ ಸೇವಾ ಮನೋಭಾವ ಮತ್ತು ಸಾಮಾಜಿಕ ಜವಾಬ್ದಾರಿ ಸಮಾಜವನ್ನು ಆರೋಗ್ಯಕರವಾಗಿಸಲು ನೆರವಾಗಬೇಕು" ಎಂದು ಕರೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಪ್ರಾಚಾರ್ಯರಾದ ಲಾಜರ್ ಸಿರಿಲ್ ಅವರು ಟಿಬಿ ರೋಗದ ವೈಜ್ಞಾನಿಕ ಅಂಶಗಳನ್ನು ವಿವರಿಸುತ್ತಾ, "ಕ್ಷಯರೋಗವೆಂದರೆ






ಏನು, ಅದು ಹೇಗೆ ಹರಡುತ್ತದೆ, ಅದರ ಲಕ್ಷಣಗಳು ಯಾವುವು ಮತ್ತು ಚಿಕಿತ್ಸೆ ಹೇಗೆ ಪಡೆಯಬೇಕು" ಎಂಬುದರ ಬಗ್ಗೆ ಸಮಗ್ರ ಮಾಹಿತಿ ನೀಡಿದರು. ಅವರು ಸರ್ಕಾರ ಜಾರಿಗೆ ತಂದಿರುವ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನೆ ಕಾರ್ಯಕ್ರಮ (NTEP), ನಿಕ್ಷಯ ಯೋಜನೆ, ಪೋಷಣಾ ಸಹಾಯ ಯೋಜನೆ, 'ಕ್ಷಯಮುಕ್ತ ಗ್ರಾಮ' ಅಭಿಯಾನ, CBNAAT ಪರೀಕ್ಷೆ ಹಾಗೂ ಆಔಖಿಖ ಚಿಕಿತ್ಸಾ ವಿಧಾನಗಳ ಮಹತ್ವವನ್ನು ವಿವರಿಸಿದರು.

"ಸರ್ಕಾರ ಉಚಿತವಾಗಿ ಟಿಬಿ ಚಿಕಿತ್ಸೆಯನ್ನು ನೀಡುತ್ತಿದೆ, ಆದ್ದರಿಂದ ಯಾವುದೇ ರೋಗಿಯೂ ಚಿಕಿತ್ಸೆಯನ್ನು ಮಧ್ಯದಲ್ಲಿ ನಿಲ್ಲಿಸಬಾರದು" ಎಂದು ಅವರು ಹೇಳಿದರು. ಕಾರ್ಯಕ್ರಮದ ಅವಧಿಯಲ್ಲಿ ಟಿಬಿ ತಡೆಗಟ್ಟುವಿಕೆ, ಬೇಗ ಪತ್ತೆ ಹಾಗೂ ಪೂರ್ಣ ಚಿಕಿತ್ಸೆ ಕು–ರಿತು ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸುವ ಹಲವಾರು ಅಂಶಗಳನ್ನು ಚರ್ಚಿಸಲಾಯಿತು. ಜೊತೆಗೆ ಸಮಾಜದಲ್ಲಿ ಟಿಬಿ ಬಗ್ಗೆ ಇರುವ ಅಪನಂಬಿಕೆಗಳನ್ನು ನಿವಾರಿಸುವ ಅಗತ್ಯತೆಯ ಮೇಲೂ ಒತ್ತಡ ನೀಡಲಾಯಿತು. ಕಾರ್ಯಕ್ರಮದ ನಿರೂಪಣೆ ಮತ್ತು ಸಂಂ–ಯೋಜನೆಯನ್ನು ನರ್ಸಿಂಗ್ ವಿಭಾಗದ ಉಪನ್ಯಾಸಕರಾದ ವೀರೇಶ್ ಅವರು ಸುಗಮವಾಗಿ ನೆರವೇರಿಸಿದರು.

ಈ ಕಾರ್ಯಕ್ರಮದಲ್ಲಿ ಆಶು, ಪಾಶಾ, ಶೋಭಾ, ವೀರೇಶ್ವರಿ, ರಾಧಿಕಾ, ವೀರೇಶ್, ಸುಧಾ, ಧರ್ಮ, ಪುಟ್ಟರಾಜ ಸೇರಿದಂತೆ ಅನೇಕ ವಿದ್ಯಾರ್ಥಿಗಳು ಹಾಗೂ ಬೋಧಕ–ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು. ಎಲ್ಲರೂ ಈ ಜಾಗೃತಿ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಒಟ್ಟಾರೆಯಾಗಿ, ಈ ವಿಶ್ವ ಟಿಬಿ ದಿನಾಚರಣೆಯು ವಿದ್ಯಾರ್ಥಿಗಳಲ್ಲಿ ಆರೋಗ್ಯ ಅರಿವು ಹೆಚ್ಚಿಸುವುದರ ಜೊತೆಗೆ ಸಮಾಜದಲ್ಲಿ ಕ್ಷಯರೋಗ ನಿರ್ಮೂಲನೆಗೆ ಸಹಕಾರ ನೀಡುವ ದೃಢ ಸಂಕಲ್ಪವನ್ನು ಮೂಡಿಸಿತು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಎಲೆಕ್ಟ್ರಾನಿಕ್ಸ್ ಮತ್ತು ಇನ್ಸ್ಟ್ರುಮೆಂಟೇಶನ್ ಇಂಜಿನಿಯರಿಂಗ್

ಎಲೆಕ್ಟ್ರಾನಿಕ್ಸ್ ಮತ್ತು ಇನ್ಸ್ಟ್ರುಮೆಂಟೇಶನ್ ಇಂಜಿನಿಯರಿಂಗ್ (EIE) ಎಂಬುದು ಕೈಗಾರಿಕಾ ಆಟೊಮೇಷನ್, ಸಂವೇದಕಗಳು (sensors), ಮತ್ತು ನಿಯಂತ್ರಣ ವ್ಯವಸ್ಥೆಗಳ (control systems) ಮೇಲೆ ಕೇಂದ್ರೀಕರಿಸುವ 4 ವರ್ಷಗಳ (8 ಸೆಮಿಸ್ಟರ್‌ಗಳು) ಬಿ.ಇ./ಬಿ.ಟೆಕ್ ಪದವಿಯಾಗಿದೆ. ಇದು ಎಲೆಕ್ಟ್ರಾನಿಕ್ಸ್ ಮತ್ತು ಅಳತೆ ಉಪಕರಣಗಳ ವಿನ್ಯಾಸ, ಸ್ಥಾಪನೆ ಮತ್ತು ನಿರ್ವಹಣೆಯನ್ನು ಒಳಗೊಂಡಿದೆ. ಕೋರ್ಸ್ ವಿವರಗಳು (Course Details): ಅರ್ಹತೆ (Eligibility): ದ್ವಿತೀಯ ಪಿಯುಸಿ ಅಥವಾ 12ನೇ ತರಗತಿಯಲ್ಲಿ ವಿಜ್ಞಾನ ವಿಭಾಗದಲ್ಲಿ (PCM - Physics, Chemistry, Maths) ಕನಿಷ್ಠ ಶೇ. 50–60 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಪ್ರವೇಶ ಪರೀಕ್ಷೆ (Entrance Exams): ಕೆ–ಸಿಇಟಿ (KCET), eÉEE ಮೇನ್ (JEE Main), ಕಾಮೆಡ್–ಕೆ (COMEDK). ಮುಖ್ಯ ವಿಷಯಗಳು (Key Subjects): ಸೆನ್ಸಾರ್‌ಗಳು ಮತ್ತು ಟ್ರಾನ್ಸ್‌ಡ್ಯೂಸರ್‌ಗಳು, ಕೈಗಾರಿಕಾ ಆಟೊಮೇಷನ್ (PLC/SCADA), ಕಂಟ್ರೋಲ್ ಸಿಸ್ಟಮ್ಸ್, ಎಲೆಕ್ಟ್ರಾನಿಕ್ ಸರ್ಕ್ಯೂಟ್‌ಗಳು, ಡಿಜಿಟಲ್ ಸಿಗ್ನಲ್ ಪ್ರೊಸೆಸಿಂಗ್, ಮತ್ತು ಮೆಷರ್ಮೆಂಟ್ ಟೆಕ್ನಿಕ್ಸ್. ವೃತ್ತಿ ಅವಕಾಶಗಳು (Career Scope): ಇನ್ಸ್ಟ್ರುಮೆಂಟೇಶನ್ ಇಂಜಿನಿಯರ್, ಕಂಟ್ರೋಲ್ ಸಿಸ್ಟಮ್ಸ್ ಇಂಜಿನಿಯರ್, ಆಟೊಮೇಷನ್ ಇಂಜಿನಿಯರ್, ಮತ್ತು ಎಂಬೆಡೆಡ್ ಸಿಸ್ಟಮ್ಸ್ ಡೆವಲಪರ್ ಪಾತ್ರಗಳಲ್ಲಿ ಕೆಲಸ ಮಾಡಬಹುದು. ಕ್ಷೇತ್ರಗಳು (Industries): ತೈಲ ಮತ್ತು ಅನಿಲ (Oil & Gas), ವಿದ್ಯುತ್ ಉತ್ಪಾದನೆ, ಉತ್ಪಾದನಾ ಘಟಕಗಳು (Manufacturing), ಮತ್ತು ಆಟೊಮೊಬೈಲ್ ಕಂಪನಿಗಳು.

## ಅಲೆಮಾರಿ, ಅರೆ ಅಲೆಮಾರಿ ಜನಾಂಗದವರು ವಾಸಿಸುವ ಕಾಲೊನಿಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸಿ –ಜಿಲ್ಲಾಧಿಕಾರಿ ಡಾ. ಆನಂದ ಕೆ.

ನೈಜ್ಯ ದೆಸೆ ನ್ಯೂಸ್

**ವಿಜಯಪುರ: ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದವರು ವಾಸಿಸುವ ಕಾಲೋನಿಗಳಿಗೆ ಮೂಲಭೂತ ಸೌಲಭ್ಯ ಒದಗಿಸಿ, ಸರ್ಕಾರದ ಯೋಜನೆ ಅನುಷ್ಠಾನಗೊಳಿಸಿ ಅವರಿಗೆ ಸರ್ಕಾರ ನೀಡುವ ಸೌಲಭ್ಯ ಒದಗಿಸಿ ಎಂದು ಜಿಲ್ಲಾಧಿಕಾರಿ ಆನಂದ ಕೆ. ಅವರು ಅಧಿಕಾರಿಗಳಿಗೆ ಸೂಚಿಸಿದರು.**

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಕರ್ನಾಟಕ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಅಲೆಮಾರಿ ಸಮುದಾಯಗಳ ಒಂದನೇ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಮುದಾಯ ಕೇಂದ್ರ, ಭೂ ಒಡೆತನ, ಅಂಗನವಾಡಿ ಕೇಂದ್ರ, ಗಂಗಾ ಕಲ್ಯಾಣ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಬೊರ್ ವೆಲ್ ಕೊರೆಯಿಸುವ ಬಗ್ಗೆ ಸದಸ್ಯರು ವಿಷಯ ಪ್ರಸ್ತಾಪಿಸಿದರು ಕುಡಿಯುವ ನೀರು, ವಿದ್ಯುತ್ ಸಮಸ್ಯೆ, ಮೂಲಭೂತ ಸೌಲಭ್ಯ ಒದಗಿಸಿ,



ಈ ಸಮುದಾಯದ ಕಾಲೋನಿಗಳ ಮಕ್ಕಳಿಗಾಗಿ ಅಂಗನವಾಡಿ ಕೇಂದ್ರ ಸೌಲಭ್ಯ ಒದಗಿಸಿದ್ದು, ಸಮರ್ಪವಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಈ ಜನಾಂಗದವರ ಅಭಿವೃದ್ಧಿಗಾಗಿ ಸರ್ಕಾರ ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಅವರಿಗೆ ದೊರಕಿಸಬೇಕಾದ ಸೌಲಭ್ಯಗಳನ್ನು ತಲುಪಿಸಿ,ಜನಾಂಗದ ಆರ್ಥಿಕ ಅಭಿವೃದ್ಧಿಗಾಗಿ ಮೂಲಭೂತ ಸೌಲಭ್ಯ ಕಲ್ಪಿಸುವುದು ಸೇರಿದಂತೆ ಹಲವಾರು ಯೋಜನೆಗಳನ್ನು ಅರ್ಹರಿಗೆ ತಲುಪಿಸಿ ಜನಾಂಗದವರ ಆರ್ಥಿಕ ಸ್ವಾವಲಂಬನೆ ಹೊಂದಲು ಈ ಸಮುದಾಯಗಳಿಗೆ ಸರ್ಕಾರ ನೀಡುವ ಆರ್ಥಿಕ ಬೆಂಬಲದ ಯೋಜನೆಗಳ ಬಗ್ಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅರಿವು ಜಾಗೃತಿ ಮೂಡಿಸಿ ನಿಗಮದಿಂದ ಅನುಷ್ಠಾನಗೊಳ್ಳುವ ಸರ್ಕಾರದ ವಿವಿಧ ಸೌಲಭ್ಯ– ಸವಲತ್ತುಗಳನ್ನು ಅರ್ಹರು ಪಡೆದುಕೊಳ್ಳಲು ತಿಳಿವಳಿಕೆ ನೀಡುವಂತೆ ಸೂಚಿಸಿದರು. 2022 ರಿಂದ 2025–26ನೇ ಸಾಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ವಿವಿಧ ಯೋಜನೆಯಡಿ ನಿಗದಿಪಡಿಸಿರುವ ಭೌತಿಕ ಮತ್ತು ಆರ್ಥಿಕ ಗುರಿಗಳ ಮಾಹಿತಿ ವಿವರ ಸಭೆಗೆ ಮಂಡಿಸಲಾಯಿತು.

ಈಗಾಗಲೇ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಉದ್ಯಮಶೀಲತಾ, ಸ್ವಾವಲಂಬಿ ಸಾರಥಿ ಯೋಜನೆ ಯೋಜನೆಯಡಿ ಅರ್ಜಿ ಸಲ್ಲಿಸಿದ ಫಲಾನುಭವಿಗಳಿಗೆ ಎಳಂಬವಾಗದಂತೆ ಕ್ರಮ ವಹಿಸಿ ಯೋಜನೆ ಲಾಭ ಪಡೆದುಕೊಳ್ಳಲು ಅನುಕೂಲ ಮಾಡಿಕೊಡುವಂತೆ ಅಧಿಕಾರಿಗಳಿಗೆ ಅವರು ಸೂಚಿಸಿದರು. ಈ ಸಮುದಾಯದ ಕಟ್ಟಡ ಕಾರ್ಮಿಕರಿಗೆ ಕಾರ್ಮಿಕ ಕಾರ್ಡ್ ವಿತರಿಸಿ ಅವರಿಗೆ ಸರ್ಕಾರದಿಂದ ದೊರೆಯುವ ಸೌಲಭ್ಯ ಒದಗಿಸಲು ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಮಕ್ಕಳ ಶಿಕ್ಷಣಕ್ಕಾಗಿ ಗ್ರಂಥಾಲಯ ಸ್ಥಾಪನೆ, ನಗರದ ವಾರ್ಡ್ ನಂ.6ರಲ್ಲಿ ಸಮುದಾಯ ಭವನದ ಮುಂಭಾಗದಲ್ಲಿರುವ ಚರಂಡಿ ಸಮರ್ಪಕ ಕಾಮಗಾರಿ, ಅತಿ ಹೆಚ್ಚು ಜನ ವಾಸಿಸುವ ಸ್ಥಳದಲ್ಲಿ ನ್ಯಾಯಬೆಲೆ ಅಂಗಡಿ ಸ್ಥಾಪನೆ, ಬೀದಿ ದೀಪ, ಈ ಸಮುದಾಯ ವಾಸಿಸುವ ಕಾಲೊನಿಯಲ್ಲಿ ಮೂಲಭೂತ ಸೌಕರ್ಯ ಒದಗಿಸಿ ಅಭಿವೃದ್ಧಿ ಪಡಿಸುವಂತೆ ಸಮಿತಿ ಸದಸ್ಯರು ಕೋರಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷಣ ನಿಂಬರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬದ್ರುದ್ದೀನ್ ಸೌದಾಗರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸಂಪತಕುಮಾರ ಗುಣಾರಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಮಹೇಶ ಪೋತದಾರ, ಹೆಸ್ಕಾಂ ಅಧಿಕ್ಷಕ ಅಭಿಯಂತರರಾದ ಸಿದ್ದಪ್ಪ ಬಿಂಜಗೇರಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಮತ್ತು ಬುಡಕಟ್ಟು ಸಮುದಾಯದ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರಾದ ಸುನೀಲ ನಾರಾಯಣ ಭಜಂತ್ರಿ, ಸಂಜೀವಕುಮಾರ ದಶವಂತ, ಧರ್ಮಣ್ಣ ವಿಭೂತಿ, ರಾಹುಲ ಶಿಳ್ಳೆಕ್ಯಾತರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಕೆಎಐಡಿಬಿ ಕೋಟಿ ಕೋಟಿ ಹಣ ಲೂಟಿ ಮಾಡಿದ ಭೂಪ

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ: ಇತನ ಹೆಸರು ಸಂತೋಷ್ ಕುಮಾರ್ , ಕೆಆರ್ ಎಸ್ ಪಕ್ಷದ ಎಸ್ಸಿ ಎಸ್ಟಿ ಘಟಕದ ರಾಜ್ಯ ಉಪಾಧ್ಯಕ್ಷನಾಗಿದ್ದ. ಪ್ರಾಮಾಣಿಕತೆ ಬಗ್ಗೆ ಅನೇಕ ಅಧಿಕಾರಿಗಳಿಗೆ ಪಾಠ ಹೇಳುತ್ತಿದ್ದ. ಭ್ರಷ್ಟಾಚಾರದ ಬಗ್ಗೆ ಭಾಷಣ ಮಾಡುತ್ತಿದ್ದ. ಆದರೆ ಈತನೇ ಕೆ–ಎಐಡಿ ಗೆ ಸಂಬಂಧಿಸಿದ ಕೋಟಿ, ಕೋಟಿ ರೂ ಲಪಟಾಯಿಸಿರುವ ಬಗ್ಗೆ ಪ್ರಕರಣ ದಾಖಲಾಗಿದೆ. ಕೆಐಎಡಿ ಬಳ್ಳಾರಿ ವಲಯ ಕಚೇರಿಯಲ್ಲಿ ಗುತ್ತಿಗೆ ನೌಕರನಾಗಿದ್ದ ಈ ಸಂತೋಷ್ ಕಳೆದ 2022 ರಿಂದ 26 ರ ವರೆಗೆ 16.7 ಕೋಟಿ ರೂ ವಂಚನೆ ಮಾಡಿರುವ ಬಗ್ಗೆ ಎಪಿಎಂಸಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. 15 ಕೋಟಿ ರೂ ಮೇಲೆ ವಂಚನೆ ಪ್ರಕರಣ ಇದಾಗಿರುವುದರಿಂದ ಈ ಕೇಸು ಸಿಐಡಿ ತನಿಖೆಗೆ ನೀಡಲಿದೆಯಂತೆ. ಪ್ರಕರಣ ದಾಖಲಾದ ಮೇಲೆ ಈ ಸಂತೋಷ್ ನಾಪತ್ತೆಯಾಗಿದ್ದಾನೆ.**



ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಬಳ್ಳಾರಿ ವಲಯ ಕಛೇರಿಯಲ್ಲಿನ ಅಧಿಕಾರಿಗಳ ನಕಲಿ ಸಹಿ ಮಾಡಿ ಹಣ ಲಪಟಾಯಿಸಿದ್ದಾನಂತೆ. ಇದು ಅಂತ–ರಿಕ ಲೆಕ್ಕಪರಿಶೋಧನೆಯ ಸಮಯದಲ್ಲಿ ಬೆಳಕಿಗೆ ಬಂದಿದೆ. ಸಂತೋಷ್ ಜೊತೆಗೆ ಯೂನಿಯನ್ ಬ್ಯಾಂಕ್ ಸಿಬ್ಬಂದಿ ಸಹ ಇದರಲ್ಲಿ ಪಾಲುದಾರರಾಗಿದ್ದಾರಂತೆ. ಹಣ ಲಪಟಾಯಿಸುವ ಪ್ರಕ್ರಿಯೆ 2022 ರಿಂದಲೂ ನಡೆದಿದ್ದರೂ ಮೇಲಾಧಿಕಾ–ರಿಗಳ ಗಮನಕ್ಕೆ ಯಾಕೆ ಬರಲಿಲ್ಲ ಎಂಬ ಪ್ರಶ್ನೆಯೂ ಉದ್ಭವವಾಗುತ್ತದೆ. ಅಲ್ಲದೆ ಆಂತರಿಕ ಲೆಕ್ಕ ಪರಿಶೋಧನೆ 2022 ರಿಂದ ನಡೆದಿರಲಿಲ್ಲವೇ, ನಡೆದಿದ್ದರೆ ಅಂತ–ರಿಕ ಪರಿಶೋದನೆ ನಡೆಸಿದವರೂ ಏಕೆ ಆಗ ಸುಮ್ಮನಿದ್ದರು ಎಂಬ ಪ್ರಶ್ನೆ ಕಾಡುತ್ತದೆ.

ನಮ್ಮದು ಪ್ರಾಮಾಣಿಕ ಪಕ್ಷ ಉಳಿದವರೆಲ್ಲ ಭ್ರಷ್ಟರು ಎಂಬಂತೆ ಬಿಂಬಿಸಿಕೊಳ್ಳುವ ಕೆಆರ್ ಎಸ್ ಪಕ್ಷ ದಿಂದ ಈ ಸಂತೋಷ್ ಕಳೆದ ವಿಧಾನ ಸಭಾ ಚುನಾವಣೆಯಲ್ಲಿ ಹಗ–ರಿಬೊಮ್ಮನಹಳ್ಳಿ ಕ್ಷೇತ್ರದಿಂದ ಸ್ಪರ್ಧೆ ಮಾಡಿದ್ದರು. ಒಂದು ಕಡೆ ಕೆಐಎಡಿ ಹಣ ನುಂಗುತ್ತ, ಮತ್ತೊಂದು ಕಡೆ ಚುನಾವಣೆಯಲ್ಲಿ ನಾನು ಪ್ರಾಮಾಣಿಕವಾಗಿ ಇರುತ್ತೇನೆ ಎಂದು ಮತ ಕೇಳಿದ್ದು ಮಾತ್ರ ವಿಪರ್ಯಾಸ ಎನ್ನಬಹುದು.

## ಪ್ರೇಕ್ಷಕರನ್ನು ಚಿಂತೆಗೆ ಹಚ್ಚಬಲ್ಲ ಚಿತ್ರವಾಗಲಿದೆ "ಅವಧೂತ"


ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ನಗರದಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಜೆ ಡಿ ಎನ್ ಮೂವೀಸ್ ಅರ್ಪಿಸಿ, ಸ್ಫೂರ್ತಿ ಕ್ರಿಯೇಷನ್ಸ್ ನಿರ್ಮಿಸುತ್ತಿರುವ " ಅವಧೂತ " ಚಲನಚಿತ್ರದ ಶೀರ್ಷಿಕೆಯನ್ನು ಅನಾವರಣ ಗೊಳಿಸಲಾಯಿತು. ಶ್ರೀಮತಿ. ಬಿ. ಅಶ್ವಿನಿ ಯವರು ಶೀರ್ಷಿಕೆಯನ್ನು ಅನಾವರಣಗೊಳಿಸಿ ಚಿತ್ರ ತಂಡಕ್ಕೆ ಶುಭ ಹಾರೈಸಿದರು.**




ಅನುಭವಿ ನಿರ್ದೇಶಕ ಗಂಧರ್ವ ರಾಯರಾವುತ ನಿರ್ದೇಶಸುತ್ತಿರುವ ಈ ಚಿತ್ರಕ್ಕೆ ಡಾ. ಜೋಗಿಲ ಸಿದ್ದರಾಜು ಅವರ ಸಂಗೀತ ಸಂಯೋಜನೆಯಿದ್ದು, ಅವಿರತ ಹರೀಶ್ ಅವರು ಸಾಹಿತ್ಯ ಸಂಭಾಷಣೆಯ ಹೊಣೆ ಹೊತ್ತಿದ್ದಾರೆ. ಶ್ರೀರಾಮ್ ಗಂಧರ್ವ ಹಾಗೂ ಶಶಿಕಲಾ ಅವರ ಹಿನ್ನಲೆ ಗಾಯನವಿದೆ. ತಾರಾಗಣದಲ್ಲಿ ಬಹುತೇಕ ನುರಿತ ರಂಗಭೂಮಿಯ ಕಲಾವಿದರಿದ್ದು, ಅನೇಕ ನವಪ್ರತಿಭೆಗಳು ಬೆಳ್ಳಿ ತೆರೆಗೆ ಪಾದಾರ್ಪಣೆ ಮಾಡುತ್ತಿದ್ದಾರೆ. ಜೆ ಡಿ ಎನ್ ಮೂವೀಸ್ ನ ಮಾಲೀಕರಾದ ಶ್ರೀ ಜೆ. ಧನರಾಜ್ ನಾಯ್ಡು ರವರ ಸಾರಥ್ಯದಲ್ಲಿ ಇಡೀ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

# 7 ಸಾವಿರ ರೂಪಾಯಿಗೆ ಯುವಕನ ಕೊಲೆ; ಐವರ ಅರೆಸ್ಟ್



ನೈಜ್ಯ ದೆಸೆ ನ್ಯೂಸ್

**ಹಾಸನ: ಕೇವಲ 7 ಸಾವಿರ ರೂ. ಹಣಕಾಸು ವಿವಾದವೇ ಯುವಕನೊಬ್ಬನ ಅಪಹರಣ, ಅಮಾನುಷ ಹಿಂಸೆ ಹಾಗೂ ಕೊನೆಗೆ ದೇಹ ಸುಟ್ಟುಹಾಕುವ ಮಟ್ಟಕ್ಕೆ ತಲುಪಿದ ಕ್ರೂರ ಹತ್ಯೆ ಪ್ರಕರಣ ಹಾಸನ ಜಿಲ್ಲೆಯನ್ನು ನಡುಗಿಸಿದೆ.**

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತ ಅವರು ಪ್ರಕರಣದ ವಿವರಗಳನ್ನು ಬಹಿರಂಗಪಡಿಸಿದರು. ಕೆ.ಎಂ. ವರುಣ್ ಎಂಬ ಯುವಕನನ್ನು ಅಪಹರಿಸಿ ಎರಡು ದಿನಗಳ ಕಾಲ ನಿರಂತರವಾಗಿ ಹಲ್ಲೆ ನಡೆಸಿ ಕೊಲೆ ಮಾಡಿರುವ ಪ್ರಕರಣದಲ್ಲಿ ಸತೀಶ್, ಉಮರ್, ವಿಜಯ ನಾಯಕ್, ದಾಸರಕೊಪ್ಪಲು ಚೇತನ್ ಹಾಗೂ ಮನು ಎಂಬಾತರನ್ನು ಬಂಧಿಸಲಾಗಿದೆ. ಪ್ರಮುಖ ಆರೋಪಿ ಶಶಾಂಕ್ ಸಹಿತ ಇನ್ನಿತರ ಆರೋಪಿಗಳಿಗಾಗಿ ಪೊಲೀಸರು ಶೋಧ ಕಾರ್ಯ ಮುಂದುವರಿಸಿದ್ದಾರೆ.

ಪ್ರಾಥಮಿಕ ತನಿಖೆ ಪ್ರಕಾರ, ಶಶಾಂಕ್, ವರುಣ್‌ಗೆ 7 ಸಾವಿರ ರೂಪಾಯಿ ನೀಡಿದ್ದನು. ಹಣ ಮರಳಿ ನೀಡದ ಹಿನ್ನೆಲೆಯಲ್ಲಿ ಉಂಟಾದ ವೈಮನಸ್ಸು ದ್ವೇಷಕ್ಕೆ ತಿರುಗಿ ಕೊಲೆಗೆ ಕಾರಣವಾಗಿದೆ. ಮಾರ್ಚ್ 10ರಂದು 'ಬೈಕ್ ರಿಪೇರಿ' ಎಂದು ಹೇಳಿ ಮನೆಯಿಂದ ಹೊರಟಿದ್ದ ವರುಣ್, ನಂತರ ಮನೆಗೆ ಮರಳಿರಲಿಲ್ಲ. ಇದೇ ದಿನ ವರುಣ್ ಹಾಗೂ ಆತನ ಸ್ನೇಹಿತ ಲೋಹಿತ್ ಅವರನ್ನು ಆರೋಪಿಗಳು ಕರೆದುಕೊಂಡು ಹೋಗಿ ಹಂಗರಹಳ್ಳಿ ಗ್ರಾಮದ ತೋಟದ ಮನೆಯಲ್ಲಿ ಬಂಧಿಸಿ ಹಲ್ಲೆ ನಡೆಸಿದ್ದಾರೆ. ಮಾರ್ಚ್ 11ರಂದು ನೀರು ತರಲು ಕಳುಹಿಸಿದ ವೇಳೆ ಲೋಹಿತ್ ಆರೋಪಿಗಳ ಕೈಯಿಂದ ತಪ್ಪಿಸಿಕೊಂಡು ಪಾರಾಗಿ ಗ್ರಾಮಸ್ಥರಿಗೆ ಮಾಹಿತಿ ನೀಡಿದ್ದಾನೆ. ಆದರೆ ನಿರಂತರ ಹಲ್ಲೆಯಿಂದಾಗಿ ವರುಣ್ ಮೃತಪಟ್ಟಿದ್ದಾನೆ ಎಂದು ಎಸ್‌ಪಿ ವಿವರಿಸಿದರು.

ಘಟನೆ ಬಳಿಕ ಆರೋಪಿಗಳು ತಮ್ಮ ಕೃತ್ಯ ಮುಚ್ಚಿಹಾಕಲು ಮೃತದೇಹವನ್ನು ಹಂಗರಹಳ್ಳಿಯಿಂದ ಗುಂಡೇಗೌಡನಕೊಪ್ಪಲಿಗೆ ಸಾಗಿಸಿ ಎರಡು ದಿನಗಳ ಕಾಲ ಇಟ್ಟು ನಂತರ ಮಾರ್ಚ್ 13ರಂದು ಸುಟ್ಟುಹಾಕಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

## ಕೋವಿಡ್‌ನಂತಹ ಪರಿಸ್ಥಿತಿ ಎದುರಿಸಲು ಸಿದ್ಧರಾಗಿ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಕೋವಿಡ್ ಸಾಂಕ್ರಾಮಿಕ ಸಮಯದಲ್ಲಿ ಒಗ್ಗಟ್ಟಿನಿಂದ ನಿಂತು ಹೇಗೆ ಪರಿಸ್ಥಿತಿ ಎದುರಿಸಿದ್ದೆವೋ ಅದೇ ರೀತಿ, ಈ ಬಾರಿಯೂ ಎಲ್ಲರೂ ಸಿದ್ಧರಾಗಿರಬೇಕು ಎಂದು ಪ್ರಧಾನಿ ನರೇಂದ್ರ ಮೋದಿಹೇಳಿದ್ದಾರೆ. ಪಶ್ಚಿಮ ಏಷ್ಯಾ ಸಂಘರ್ಷದ ಕುರಿತಂತೆ ಲೋಕಸಭೆಯಲ್ಲಿ ಮಾತನಾಡಿರುವ ಅವರು, ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಯುದ್ಧವನ್ನು ಗಮನಿಸಿದರೆ, ಸವಾಲಿನ ಜಾಗತಿ–ಕ ಪರಿಸ್ಥಿತಿ ದೀರ್ಘಕಾಲದವರೆಗೆ ಮುಂದುವರಿಯಬಹುದು ಹೀಗಾಗಿ ನಾವು ಸಿದ್ಧರಾಗಿರಬೇಕು ಎಂದರು.**



ಈ ಕಷ್ಟಕರ ಸಂದರ್ಭಗಳ ಪರಿಣಾಮಗಳು ಪ್ರಪಂಚದಾದ್ಯಂತ ದೀರ್ಘಕಾಲ ಉಳಿಯುವ ನಿರೀಕ್ಷೆಯಿದ್ದು, ಕೋವಿಡ್–19 ಪರಿಸ್ಥಿತಿಯನ್ನು ಎದುರಿಸಿದಂತೆಯೇ, ನಾವು ಮತ್ತೆ ಅದೇ ರೀತಿಯಲ್ಲಿ ಪ್ರತಿಕ್ರಿಯಿಸಲು ಸಿದ್ಧರಾಗಿರಬೇಕು ಎಂದರು. ನಾವೆಲ್ಲ ಈ ಸವಾಲನ್ನು ತಾಳ್ಮೆ ಮತ್ತು ಪರಿಶ್ರಮದಿಂದ ಎದುರಿಸಬೇಕಾಗಿದೆ, ಇದು ನಮ್ಮ ಶಕ್ತಿ. ಎಲ್ಲರೂ ಜಾಗರೂಕರಾಗಿರಬೇಕು. ಈ ಪರಿಸ್ಥಿತಿಯ ಲಾಭ ಪಡೆದು ಸುಳ್ಳು ಹರಡಲು ಪ್ರಯತ್ನಿಸುವ ಜನ–ರಿದ್ದಾರೆ. ಅವರನ್ನು ಯಶಸ್ವಿಯಾಗಲು ಬಿಡಬಾರದು ಎಂದರು.

## ವಿದ್ಯಾರ್ಥಿಗಳಿಗೆ ವಿಜಯ್ ಕುಮಾರ್ ದಂಪತಿಯಿಂದ ಬ್ಯಾಗ್ ವಿತರಣೆ ಶಿಕ್ಷಣಕ್ಕೆ ಉತ್ತೇಜನ

ನೈಜ್ಯ ದೆಸೆ ನ್ಯೂಸ್

**ಮಾಲೂರು: ನಗರದ ರೈಲ್ವೆ ಸ್ಟೇಷನ್ ಸಮೀಪ ಇರುವ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಮಾಜ ಸೇವಕ ಹೂಡಿ ವಿಜಯ್ ಕುಮಾರ್ ದಂಪತಿ ಸುಮಾರು 1200 ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್‌ಗಳನ್ನು ವಿತರಣೆ ಮಾಡುವ ಮೂಲಕ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಿದರು.**

ಕಾರ್ಯಕ್ರಮದ ಅಂಗವಾಗಿ ಕಾಲೇಜಿಗೆ ಭೇಟಿ ನೀಡಿದ ಹೂಡಿ ವಿಜಯ್ ಕುಮಾರ್ ಹಾಗೂ ಅವರ ಪತ್ನಿ ಶ್ವೇತಾ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಅವರ ಭವಿಷ್ಯದ ಗುರಿಗಳ ಬಗ್ಗೆ ವಿಚಾರಿಸಿದರು. ಬಳಿಕ ವಿದ್ಯಾರ್ಥಿಗಳಿಗೆ ಬ್ಯಾಗ್‌ಗಳನ್ನು ವಿತರಿಸಿ ಅವರ ಶಿಕ್ಷಣದ ಪ್ರಯಾಣಕ್ಕೆ ಸಹಕಾರ ನೀಡಿದರು. ಈ ವೇಳೆ ಮಾತನಾಡಿದ ಹೂಡಿ ವಿಜಯ್ ಕುಮಾರ್ ಅವರು, "ನಾನು ಈಗಾಗಲೇ ತಾಲ್ಲೂಕಿನಲ್ಲಿ ವಾಲಿಬಾಲ್, ಕ್ರಿಕೆಟ್, ಕಬಡ್ಡಿ ಸೇರಿದಂತೆ ವಿವಿಧ ಕ್ರೀಡಾಕ್ಷೇತ್ರಗಳಲ್ಲಿ ಮತ್ತು ಸಾಮಾಜಿಕ ಕ್ಷೇತ್ರದಲ್ಲಿ ಹಲವು




ಸೇವಾ ಕಾರ್ಯಗಳನ್ನು ಮಾಡಿಕೊಂಡು ಬರುತ್ತಿದ್ದೇನೆ. ಇದೀಗ ವಿದ್ಯಾರ್ಥಿಗಳಿಗೆ ಸಹಾಯವಾಗಬೇಕು ಎಂಬ ಉದ್ದೇಶದಿಂದ ಕಾಲೇಜು ವಿದ್ಯಾರ್ಥಿಗಳಿಗೆ ಬ್ಯಾಗ್‌ಗಳನ್ನು ವಿತರಣೆ ಮಾಡುತ್ತಿದ್ದೇವೆ," ಎಂದು ತಿಳಿಸಿದರು.


ಇನ್ನೂ ಮಾತನಾಡಿದ ಶ್ವೇತಾ ಹೂಡಿ ವಿಜಯ್ ಕುಮಾರ್ ಅವರು, "ನಾವು ಕಳೆದ ಐದು ವರ್ಷಗಳಿಂದ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದೇವೆ. ಬಡ ಕುಟುಂಬಗಳ ಮಕ್ಕಳಿಗೆ ಶಿಕ್ಷಣದಲ್ಲಿ ಅಡಚಣೆ ಆಗಬಾರದು ಎಂಬ ನಿಟ್ಟಿನಲ್ಲಿ ಈ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ವಿದ್ಯಾರ್ಥಿಗಳು ಉತ್ತಮವಾಗಿ ಓದಿ ಐಎಎಸ್, ಐಪಿಎಸ್ ಹುದ್ದೆಗಳನ್ನು ಅಲಂಕರಿಸಬೇಕು," ಎಂದು ಪ್ರೇರಣಾದಾಯಕ ಸಂದೇಶ ನೀಡಿದರು. ಈ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಸಂತೋಷ ಮತ್ತು ಉತ್ಸಾಹವನ್ನುಂಟುಮಾಡಿದ್ದು, ದಂಪತಿಯ ಈ ಕಾರ್ಯಕ್ಕೆ ಕಾಲೇಜು ಆಡಳಿತ ಮಂಡಳಿ ಮತ್ತು ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದರು. ಶಿಕ್ಷಣ ಕ್ಷೇತ್ರದಲ್ಲಿ ಇಂತಹ ಸಹಾಯ ಕಾರ್ಯಗಳು ಮುಂದುವರಿಯಬೇಕು ಎಂಬ ಆಶಯವನ್ನು ಹಲವರು ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಅಧ್ಯಕ್ಷ ಬಲ್ಲಹಳ್ಳಿ ನಾರಾಯಣಸ್ವಾಮಿ, ಆರ್ ಪ್ರಭಾಕರ್, ರಾಮಮೂರ್ತಿ,ಶ್ರೀನಿವಾಸ್,ಕುಟ್ಟಿ ಕಾಲೇಜು ಪ್ರಾಂಶುಪಾಲರು ಸೇ–ರಿದಂತೆ ಇನ್ನಿತರರು ಇದ್ದರು

## 'ಕಾಂಗ್ರೆಸ್ ಪರಂಪರೆಯಂತೆ, ಅಗಲಿದ ನಾಯಕರ ಕುಟುಂಬಕ್ಕೆ ಟಿಕೆಟ್ ನೀಡಲಾಗಿದೆ, ಎರಡೂ ಕ್ಷೇತ್ರಗಳಲ್ಲಿ ನಮಗೆ ಜಯ ಸಿಗುತ್ತದೆ': ಸಿಎಂ, ಡಿಸಿಎಂ ಪ್ರಚಾರ

ನೈಜ್ಯ ದೆಸೆ ನ್ಯೂಸ್

**ಬಾಗಲಕೋಟೆ/ದಾವಣಗೆರೆ: ಏಪ್ರಿಲ್ 9ರಂದು ನಡೆಯಲಿರುವ ಉಪಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಅವರ ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಮತದಾರರಿಗೆ ಭಾವನಾತ್ಮಕವಾಗಿ ಮನವಿ ಮಾಡಿಕೊಂಡರು. ದಿವಂಗತ ಹೆಚ್.ವೈ. ಮೇಟಿ ಅವರ ಆತ್ಮಕ್ಕೆ ಶಾಂತಿ ಸಿಗಲು ಉಮೇಶ್ ಅವರನ್ನು ಗೆಲ್ಲಿಸಿ ಎಂದರು.**

ಮೇಟಿ ಕುಟುಂಬವು ಪಕ್ಷದ ಉಮೇಶ್ ಮೇಟಿ ಅವರನ್ನು ಅಭ್ಯರ್ಥಿಯಾಗಿ ಘೋಷಿಸುವ ನಿರ್ಧಾರವನ್ನು ಏಕಮತದಿಂದ ಬೆಂಬಲಿಸಿದೆ ಎಂದು ಸಿದ್ದರಾಮಯ್ಯ ಹೇಳಿದರು. ಉಮೇಶ್ ಅವರನ್ನು ಪ್ರೀತಿಯ ಪುತ್ರ ಎಂದು ಉಲ್ಲೇಖಿಸಿದ ಸಿಎಂ, ಅವರನ್ನು ಗೆಲ್ಲಿಸುವ



ಜವಾಬ್ದಾರಿ ಜನರ ಮೇಲಿದೆ ಎಂದು ಹೇಳಿದರು. ಕಾಂಗ್ರೆಸ್ ಎಲ್ಲಾ ಜಾತಿ ಮತ್ತು ಧರ್ಮಗಳನ್ನು ಒಂದಾಗಿ ತೆಗೆದುಕೊಂಡು ಜನರಿಗೆ ನೀಡಿದ ಭರವಸೆಗಳನ್ನು ಈಡೇರಿಸುವ ನಂಬಿಕೆಯನ್ನು ಹೊಂದಿದೆ ಎಂದರು.

ನಾವು ಮಾತು ಕೊಟ್ಟಂತೆ ನಡೆದುಕೊಳ್ಳುವ ಪಕ್ಷವಾಗಿರುವುದರಿಂದ ಜನರಿಗೆ ಕಾಂಗ್ರೆಸ್ ಮೇಲಿನ ನಂಬಿಕೆ ಇದೆ. ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಉಪಚುನಾವಣೆಗಳಲ್ಲಿ ನಾವು ಗೆಲ್ಲುವ ವಿಶ್ವಾಸದಲ್ಲಿದ್ದೇವೆ ಎಂದು ದಾವಣಗೆರೆಯಲ್ಲಿ ಮಾತನಾಡುವ ವೇಳೆ ಕೂಡ ಸಿದ್ದರಾಮಯ್ಯ ಹೇಳಿದರು.ಬಿಜೆಪಿ ತನ್ನ ಆಡಳಿತಾವಧಿಯಲ್ಲಿ ಅಭಿವೃದ್ಧಿ ಕಾರ್ಯಗಳಲ್ಲಿ ವಿಫಲವಾಗಿದೆ ಎಂದು ಟೀಕಿಸಿದ ಸಿಎಂ ಸಿದ್ದರಾಮಯ್ಯ, ಧರ್ಮದ ಹೆಸ–ರಿನಲ್ಲಿ ರಾಜಕೀಯ ಮಾಡುತ್ತಿದೆ ಎಂದು ಆರೋಪಿಸಿದರು. ಪ್ರಸ್ತಾವಿತ ವೈದ್ಯಕೀಯ ಕಾಲೇಜು ಸೇರಿದಂತೆ ಹಲವು ಪ್ರಮುಖ ಯೋಜನೆಗಳು ಹೆಚ್.ವೈ. ಮೇಟಿ ಅವರ ಪ್ರಯತ್ನಗಳಿಂದ ಆರಂಭಗೊಂಡವು ಎಂದು ಹೇಳಿದರು. ಜನರು ಅಭಿವೃದ್ಧಿಯನ್ನು ಆಧಾರವಾಗಿಟ್ಟುಕೊಂಡು ಮತಹಾಕಬೇಕು ಎಂದರು. ಬಿಜೆಪಿ ಬೆಂಬಲಿಗರೂ ಕೂಡ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಲಾಭ ಪಡೆಯುತ್ತಿದ್ದಾರೆ ಎಂದರು. ಸಿದ್ದರಾಮಯ್ಯ ಅವರು ಬಾಗಲಕೋಟೆಯಲ್ಲಿ ನಾಲ್ಕು ದಿನಗಳು ತಂಗಿ ಗ್ರಾಮಗಳು ಮತ್ತು ವಾರ್ಡ್‌ಗಳಲ್ಲಿ ವ್ಯಾಪಕ ಪ್ರಚಾರ ನಡೆಸುವುದಾಗಿ ಘೋಷಿಸಿದರು.

ಇದಕ್ಕೂ ಮಧ್ಯೆ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈ ಉಪಚುನಾವಣೆ ಸತ್ಯ ಮತ್ತು ಸುಳ್ಳಿನ ನಡುವೆ ಹಾಗೂ ನಂಬಿಕೆ ಮತ್ತು ಅನಂಬಿಕೆಯ ನಡುವೆ ನಡೆಯುವ ಹೋರಾಟ ಎಂದು ಹೇಳಿ, ಕಾಂಗ್ರೆಸ್ ಗೆಲುವಿನ ಬಗ್ಗೆ ವಿಶ್ವಾಸ ವ್ಯಕ್ತಪಡಿಸಿದರು. ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರ ತನ್ನ ಭರವಸೆಗಳನ್ನು ಈಡೇರಿಸಿ ಗ್ಯಾರಂಟಿಗಳನ್ನು ಜಾ–ರಿಗೊಳಿಸಿದೆ. ಹಿಂದಿನ ಬಿಜೆಪಿ ಸರ್ಕಾರವು ಈ ಪ್ರದೇಶದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸಲು ವಿಫಲವಾಯಿತು.